ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 100
6–10–2025 ಸೋಮವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 100

ಸಂಪಾದಕೀಯ.....

ಆರ್‌ಎಸ್‌ಎಸ್ ಶತಮಾನೋತ್ಸವ ಶಕ್ತಿ, ವಿವಾದ , ಭವಿಷ್ಯದ ದಾರಿ

ರಾಷ್ಟ್ರೀಯ ಸ್ವಯಂಸೇವಕ ಸಂಘ (ಆರ್‌ಎಸ್‌ಎಸ್) ತನ್ನ ಶತಮಾನೋತ್ಸವದ ಹಾದಿ ತಲುಪಿದೆ. 1925ರಲ್ಲಿ ನಾಗಪುರದಲ್ಲಿ ಹುಟ್ಟಿಕೊಂಡ ಈ ಸಂಘಟನೆಯು ಇಂದಿಗೆ 100 ವರ್ಷಗಳ ಇತಿಹಾಸವನ್ನು ಹೊತ್ತಿದೆ. ಒಂದು ಶತಮಾನ ಪೂರೈಸಿರುವ ಸಂಸ್ಥೆಯ ಕಾರ್ಯ, ಕೊಡುಗೆ ಹಾಗೂ ವಿವಾದಗಳನ್ನು ವಿಮರ್ಶಾತ್ಮಕವಾಗಿ ನೋಡಬೇಕಾದ ಸಮಯ ಇದು. ಸ್ಥಳೀಯ ಪತ್ರಿಕೆಯ ಹೊಣೆಗಾರಿಕೆಯಿಂದ, ನಾವು ಈ ಸಂದರ್ಭದಲ್ಲಿ ಅದರ "ಸದಾಕ ಭಾಧಕ"ವನ್ನು ಸ್ಪಷ್ಟವಾಗಿ ನೆನಪಿಸಿಕೊಳ್ಳಬೇಕಿದೆ.

ಆರ್‌ಎಸ್‌ಎಸ್ ಹುಟ್ಟಿದ್ದು ಬ್ರಿಟಿಷರ ಆಡಳಿತದ ಸಮಯದಲ್ಲಿ. ದೇಶ ಸ್ವಾತಂತ್ರ್ಯಕ್ಕಾಗಿ ಹೋರಾಟದಲ್ಲಿದ್ದಾಗ ಸಮಾಜದ ಏಕತೆ, ಶಿಸ್ತು ಮತ್ತು ರಾಷ್ಟ್ರಪ್ರೇಮದ ಭಾವನೆಗಳನ್ನು ಬಲಪಡಿಸುವ ಉದ್ದೇಶದಿಂದ ಕೆಶವ ಬಲರಾಮ ಹೆಡ್ಗೇವಾರ್ ಅವರು ಸಂಘವನ್ನು ಸ್ಥಾಪಿಸಿದರು. ಸಂಘವು ನೇರವಾಗಿ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸದಿದ್ದರೂ, ಅದರ ಉದ್ದೇಶ ಸಮಾಜದಲ್ಲಿ ದೇಶಾಭಿಮಾನ ಮತ್ತು ಸಂಘಟನೆ ಬೆಳಸುವುದಾಗಿತ್ತು.

ಸಮಾಜ ಸೇವೆ: ಪ್ರವಾಹ, ಭೂಕಂಪ, ಕೊರೊನಾ ಹಾವಳಿ, ಬರ ಯಾವಾಗಲೂ ಆರ್‌ಎಸ್‌ಎಸ್ ಸ್ವಯಂಸೇವಕರು ಮೊದಲು ಧಾವಿಸಿರುವುದು ಕಂಡಿದ್ದೇವೆ. ಸೇವೆಯ ದೃಷ್ಟಿಯಿಂದ ಇದು ನಿಜವಾಗಿಯೂ ಶಕ್ತಿಶಾಲಿ ಸಂಘಟನೆ.

ಶಿಕ್ಷಣ ವಲಯ: ವಿದ್ಯಾಭಾರತಿಯಂತಹ ಶಾಲೆಗಳು, ವಿದ್ಯಾರ್ಥಿ ಪರಿಷತ್, ಸೇವಾ ಬಸ್ತಿಗಳು ಇವುಗಳ ಮೂಲಕ ಶಿಕ್ಷಣವನ್ನು ಹಳ್ಳಿಗಟ್ಟಿಗೂ ತಲುಪಿಸಲಾಗಿದೆ.

ಶಿಸ್ತು ಮತ್ತು ದೇಶಾಭಿಮಾನ: ಪ್ರತಿ ಬೆಳಗ್ಗಿನ ಶಾಖೆಯಲ್ಲಿ ತರುವ ಶಿಸ್ತಿನ ಪಾಠ, ವ್ಯಾಯಾಮ, ದೇಶಪ್ರೇಮದ ಗೀತೆಗಳು ಇವೆಲ್ಲವೂ ಯುವಕರಲ್ಲಿ ಒಂದು ನೈತಿಕ ಶಕ್ತಿಯನ್ನು ಬೆಳೆಸುವ ಕೆಲಸ ಮಾಡಿವೆ.

ರಾಜಕೀಯ ಪ್ರಭಾವ: ನೇರ ರಾಜಕೀಯದಲ್ಲಿ ಭಾಗವಹಿಸದಿದ್ದರೂ, ಸಂಘದ ಚಿಂತನೆ ಮತ್ತು ಶಕ್ತಿ ಭಾರತೀಯ ಜನತಾ ಪಕ್ಷದ ಮೂಲಕ ಆಡಳಿತದ ಕೇಂದ್ರಬಿಂದುವಾಗಿದೆ. ಇದು ಆರ್‌ಎಸ್‌ಎಸ್‌ನ ದೊಡ್ಡ ಯಶಸ್ಸು. ಆದರೆ, ಆರ್‌ಎಸ್‌ಎಸ್ ಕುರಿತು ಟೀಕೆಗಳು ಕಡಿಮೆ ಇಲ್ಲ.

ಅಲ್ಪಸಂಖ್ಯಾತರ ಕಡೆಗಿನ ಅದರ ನಿಲುವು ಬಗ್ಗೆ ಸದಾ ಪ್ರಶ್ನೆಗಳು ಎದ್ದಿವೆ. ಹಿಂದುತ್ವದ ಅತಿರೇಕಕ್ಕೆ ಬೆಂಬಲ ನೀಡುತ್ತಿದೆ ಎಂಬ ಆರೋಪವೂ ಇದೆ. ಕೆಲ ಸಂದರ್ಭಗಳಲ್ಲಿ ಸಂಘಟನೆ ಸಮಾಜವನ್ನು ಧರ್ಮ ಆಧಾರಿತವಾಗಿ ವಿಭಜಿಸುತ್ತಿದೆ ಎಂಬ ಟೀಕೆಯನ್ನು ತಳ್ಳಿಹಾಕಲು ಸಂಘಕ್ಕೆ ಕಷ್ಟವಾಗುತ್ತಿದೆ.

ಇವು ಸತ್ಯವಾಗಲಿ, ಅಸತ್ಯವಾಗಲಿ ಸಂಘಟನೆಯ ಶತಮಾನೋತ್ಸವದ ಸಂದರ್ಭದಲ್ಲಿ ಈ ಪ್ರಶ್ನೆಗಳನ್ನು ಎದುರಿಸುವುದು ಅವಶ್ಯಕ.

ನಮ್ಮ ಹಳ್ಳಿಗಳು, ಪಟ್ಟಣಗಳು, ಜಿಲ್ಲೆಗಳು ಎಲ್ಲೆಡೆ ಆರ್‌ಎಸ್‌ಎಸ್ ಕಾರ್ಯಕರ್ತರ ಹಾದಿ ಕಾಣಿಸುತ್ತದೆ. ಸೇವಾ ಬಸ್ತಿಗಳಲ್ಲಿ ಮಕ್ಕಳಿಗೆ ಶಿಕ್ಷಣ, ಬಡವರಿಗೆ ಸಹಾಯ, ಸ್ವಚ್ಛತಾ ಕಾರ್ಯಕ್ರಮ ಇವುಗಳು ಜನಸಾಮಾನ್ಯರ ಹಿತಾಸಕ್ತಿ ದೃಷ್ಟಿಯಿಂದ ಒಳ್ಳೆಯದೇ ಆಗಿದೆ. ಆದರೆ, ಒಂದೇ ಸಮಯದಲ್ಲಿ ಎಲ್ಲ ವರ್ಗಗಳನ್ನೂ ಸಮಾನವಾಗಿ ನೋಡಬೇಕಾದ ಹೊಣೆಗಾರಿಕೆ ಇದೆ. ಸಂಘವು ನಿಜವಾಗಿಯೂ "ರಾಷ್ಟ್ರೀಯ" ಎಂಬ ಹೆಸರು ಹೊತ್ತಿರುವುದಾದರೆ, ಅದು ಎಲ್ಲ ಧರ್ಮ, ಜಾತಿ, ಸಮುದಾಯಗಳನ್ನು ಒಂದೇ ಬಗ್ಗೆಯಡಿ ತರುವುದು ಮುಖ್ಯ.

100 ವರ್ಷಗಳ ಪಾಠಗಳಿಂದ ಆರ್‌ಎಸ್‌ಎಸ್ ಕಲಿಯಬೇಕಾದ ಪಾಠ ಏನು?

ಪ್ರಜಾಪ್ರಭುತ್ವ, ಸಮಾನತೆ ಮತ್ತು ಧಾರ್ಮಿಕ ಸ್ವಾತಂತ್ರ್ಯ ನಮ್ಮ ದೇಶದ ಮೂಲ ತತ್ವಗಳು. ಸಂಘವು ಈ ಮೌಲ್ಯಗಳನ್ನು ಗೌರವಿಸಿದಾಗ ಮಾತ್ರ ಅದರ ಶಕ್ತಿ ನಿಜವಾದ ಅರ್ಥ ಪಡೆಯುತ್ತದೆ.

ಸಾಮಾಜಿಕ ಏಕತೆ: ಸಂಘಟನೆ ಶಕ್ತಿಯನ್ನು ಅಲ್ಪಸಂಖ್ಯಾತರ ವಿರುದ್ಧವಲ್ಲ, ಎಲ್ಲರ ಏಕತೆಗೆ ಬಳಸಬೇಕಾಗಿದೆ.

ಯುವಕರ ಶಕ್ತಿ: ಶಾಖೆಯಲ್ಲಿ ಬೆಳೆದ ಶಿಸ್ತನ್ನು ಉದ್ಯೋಗ, ವಿಜ್ಞಾನ, ಕೃಷಿ, ತಂತ್ರಜ್ಞಾನ ಇವುಗಳ ಬೆಳವಣಿಗೆಗೆ ಹರಿಸುವ ಹೊಣೆಗಾರಿಕೆ ಸಂಘದ ಮೇಲಿದೆ.

ಆರ್‌ಎಸ್‌ಎಸ್ ಶತಮಾನೋತ್ಸವವು ಕೇವಲ ಒಂದು ಸಂಸ್ಥೆಯ ಇತಿಹಾಸವಲ್ಲ; ಇದು ಭಾರತದ ರಾಜಕೀಯ, ಸಾಮಾಜಿಕ ಮತ್ತು ಸಾಂಸ್ಕೃತಿಕ ದಾರಿಯ ಪ್ರತಿಬಿಂಬ. ಒಬ್ಬರು ಅದನ್ನು ರಾಷ್ಟ್ರದ ಶಕ್ತಿ ಎಂದು ಕೊಂಡಾಡುತ್ತಾರೆ, ಮತ್ತೊಬ್ಬರು ಅದನ್ನು ಧರ್ಮದ ಆಧಾರಿತ ರಾಜಕೀಯದ ಸಾಧನವೆಂದು ಟೀಕಿಸುತ್ತಾರೆ. ಸತ್ಯ ಎಲ್ಲಿ ನಿಂತಿದೆಯೆಂದು ತೀರ್ಮಾನಿಸುವುದು ಸಮಾಜದ ಹೊಣೆಗಾರಿಕೆ.

ಆದರೆ ಒಂದು ವಿಷಯ ಸ್ಪಷ್ಟ: ಆರ್‌ಎಸ್‌ಎಸ್ ನಮ್ಮ ಸಮಾಜದ ಮೇಲೆ ಪ್ರಭಾವ ಬೀರಿದ ಶಕ್ತಿಶಾಲಿ ಸಂಸ್ಥೆ. ಈ ಶಕ್ತಿಯನ್ನು ದೇಶದ ಏಕತೆ, ಸಮಾನತೆ ಮತ್ತು ಸೌಹಾರ್ದದ ದಾರಿಯಲ್ಲಿ ಬಳಸಿದಾಗ ಮಾತ್ರ ಶತಮಾನೋತ್ಸವವು ನಿಜವಾದ ಅರ್ಥ ಪಡೆದುಕೊಳ್ಳುತ್ತದೆ

ಜಿಲ್ಲಾ ಮಟ್ಟದ ಯುವಜನೋತ್ಸವ

ದಾವಣಗೆರೆ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ದಾವಣಗೆರೆ, ನೆಹರು ಯುವ ಕೇಂದ್ರ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ದಾವಣಗೆರೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ದಾವಣಗೆರೆ ಹಾಗೂ ವಿವಿಧ ಸಂಘ–ಸಂಸ್ಥೆಗಳ ಸಹಯೋಗದೊಂದಿಗೆ ಅಕ್ಟೋಬರ್ 15 ರಂದು ನಗರದ ದೃಶ್ಯ ಕಲಾ ಮಹಾವಿದ್ಯಾಲಯ ಜಿಲ್ಲಾ ಮಟ್ಟದ ಯುವಜನೋತ್ಸವವನ್ನು ಆಯೋಜಿಸಲಾಗಿದೆ.

ಭಾಗವಹಿಸಲು ಇಚ್ಛಿಸುವ ಸ್ಪರ್ಧಾಳುಗಳು ಅ.13 ಮತ್ತು 14 ರಂದು ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ದಾವಣಗೆರೆ ಇಲ್ಲಿ ತಮ್ಮ ಆಧಾರ್ ಕಾರ್ಡ್ & ಜನನ ಪ್ರಮಾಣ ಪತ್ರದೊಂದಿಗೆ ನಿಗಧಿತ ಅರ್ಜಿ ನಮೂನೆಯನ್ನು ಪಡೆದು ತಮ್ಮ ಹೆಸರುಗಳನ್ನು ನೋಂದಣಿ ಮಾಡಿಕೊಳ್ಳಬಹುದು. ಅಥವಾ ಅ.15 ರಂದು ದೃಶ್ಯ ಕಲಾ ಮಹಾವಿದ್ಯಾಲಯ, ಇಲ್ಲಿ ಬೆಳಿಗ್ಗೆ 9 ರಿಂದ 10.30 ರ ಒಳಗಾಗಿ ನೋಂದಣಿ ಮಾಡಿಕೊಳ್ಳಬಹುದು.

ಜಿಲ್ಲಾ ಮಟ್ಟದ ಯುವಜನೋತ್ಸವದಲ್ಲಿ ಭಾಗವಹಿಸುವ ಸ್ಪರ್ಧಾಳುಗಳು 15 ರಿಂದ 29 ವರ್ಷದೊಳಗಿನ ಯುವಕ, ಯುವತಿಯರು ಮಾತ್ರ ಭಾಗವಹಿಸಬಹುದು. ದಾವಣಗೆರೆ ಜಿಲ್ಲೆಯ ಎಲ್ಲಾ ಯುವಕ, ಯುವತಿಯರು, ಸಂಘ–ಸಂಸ್ಥೆಗಳ ಪ್ರತಿನಿಧಿಗಳು, ಶಾಲಾ, ಕಾಲೇಜು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಭಾಗವಹಿಸಬಹುದಾಗಿದೆ.

ಮತ್ತೆ ಮುನ್ನೆಲೆಗೆ ಬಂದ ಲಿಂಗಾಯತ ಪ್ರತ್ಯೇಕ ಧರ್ಮ ವಿಚಾರ

ಬೆಂಗಳೂರು, ಅ.5– ಲಿಂಗಾಯತ ಪ್ರತ್ಯೇಕ ಧರ್ಮದ ಚರ್ಚೆ ಮತ್ತೊಮ್ಮೆ ಮುನ್ನೆಲೆಗೆ ಬಂದಿದೆ. ಬೇಡಿಕೆ ಈಡೇರುವವರಿಗೂ ಹೋರಾಟ ಮುಂದುವರೆಯಬೇಕೆಂಬ ಸಲಹೆಗಳು ಕೇಳಿ ಬಂದಿವೆ.

ನಗರದ ಅರಮನೆ ಮೈದಾನದಲ್ಲಿ ನಡೆದ ಬಸವಸಂಸ್ಕೃತಿ ಅಧ್ಯಯನ 2025ರ ಸಮಾರೋಪದಲ್ಲಿ ಮಾತನಾಡಿದ ನ್ಯಾಯಮೂರ್ತಿ ನಾಗಮೋಹನ ದಾಸ್, ಈ ಹಿಂದೆ ತಮ ಅಧ್ಯಕ್ಷತೆಯಲ್ಲಿ ರಚನೆಯಾಗಿದ್ದ ಸಮಿತಿ ಪ್ರತ್ಯೇಕ ಲಿಂಗಾಯತ ಧರ್ಮಕ್ಕೆ ಶಿಫಾರಸು ಮಾಡಿತ್ತು. ಅದನ್ನು ಆಧರಿಸಿ, ರಾಜ್ಯ ಸರ್ಕಾರ ಕೇಂದ್ರಕ್ಕೆ ಶಿಫಾರಸು ಮಾಡಿತ್ತು ಎಂದು ಹೇಳಿದ್ದಾರೆ. ಕೇಂದ್ರ ಸರ್ಕಾರ ಯಾವುದೇ ಸಕಾರಣ ನೀಡದೆ ಪ್ರಸ್ತಾವನೆಯನ್ನು ವಾಪಸ್ ಕಳುಹಿಸಿದೆ. ರಾಜ್ಯ ಸರ್ಕಾರ ಮತ್ತೊಮೆ ವಿವರಣೆ ಹಾಗೂ ಸ್ಪಷ್ಟನೆಗಳೊಂದಿಗೆ ಕೇಂದ್ರಕ್ಕೆ ಶಿಫಾರಸು ಕಳುಹಿಸಬೇಕು ಎಂದು ಸಲಹೆ ನೀಡಿದ್ದಾರೆ.

ಲಿಂಗಾಯತ ಧರ್ಮಕ್ಕೆ ಧಾರ್ಮಿಕ ಅಲ್ಪ ಸಂಖ್ಯಾತ ಧರ್ಮದ ಮಾನ್ಯತೆ ಸಿಗುವವರೆಗೂ ಹೋರಾಟ ಮುಂದುವರೆಯಬೇಕು. ಈ ಹೋರಾಟದಲ್ಲಿ ಮಿತ್ರರು ಯಾರು, ಶತ್ರುಗಳು ಯಾರು ಎಂದು ಗುರುತಿಸಲು ಸಾಧ್ಯವಾಗಬೇಕು. ಶತ್ರುಗಳನ್ನು ಹೆಗಲ ಮೇಲೆ ಕೂರಿಸಿಕೊಂಡು ಹೋರಾಟ ನಡೆಸಿದರೆ, ಅದು ಯಶಸ್ವಿಯಾಗುವುದಿಲ್ಲ. ಶತ್ರುಗಳನ್ನು ಹೊರಗಿಟ್ಟು ಹೋರಾಟ ರೂಪಿಸಬೇಕು ಎಂದು ಕರೆ ನೀಡಿದರು.

ಸಮಾನ ಮನಸ್ಕರ ಜೊತೆಗೂಡಿ ಸೈದ್ಧಾಂತಿಕವಾಗಿ ಹೋರಾಟ ನಡೆಸಿದರೆ, ಖಂಡಿತ ಯಶಸ್ಸು ಸಿಗುತ್ತದೆ ಎಂದು ನಾಗಮೋಹನ್‌ದಾಸ್ ಅಭಿಪ್ರಾಯಪಟ್ಟರು.

ಹಿನ್ನೆಲೆ: ಈ ಹಿಂದೆ 2013ರಿಂದ 18ರ ನಡುವೆ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಪ್ರತ್ಯೇಕ ಲಿಂಗಾಯತ ಧರ್ಮದ ಹೋರಾಟ ನಡೆದಿತ್ತು. ಆದರೆ ಅದೇ ಕಾಂಗ್ರೆಸ್ ಪಕ್ಷಕ್ಕೆ ಚುನಾವಣೆಯಲ್ಲಿ ಮುಳುವಾಗಿತ್ತು. ಸಿದ್ದರಾಮಯ್ಯ ಅವರ ಸರ್ಕಾರ ಹಲವು ಭಾಗ್ಯ ಸರಣಿಯ ಯೋಜನೆಗಳನ್ನು ಜಾರಿಗೆ ತಂದಿದ್ದರು. ಅದು ಪ್ರಯೋಜನವಾಗದೇ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಮುಗ್ಗರಿಸಿತ್ತು. ಇದಕ್ಕೆ ಪ್ರತ್ಯೇಕ ಲಿಂಗಾಯತ ಧರ್ಮದ ಹೋರಾಟವೇ ಕಾರಣ ಎಂದು ಡಿ.ಕೆ.ಶಿವಕುಮಾರ್ ಸೇರಿದಂತೆ ಅನೇಕರು ಆಕ್ಷೇಪ ವ್ಯಕ್ತಪಡಿಸಿದರು.

ಸುಮಾರು 7 ವರ್ಷಗಳ ಕಾಲ ತಣ್ಣಗಿದ್ದ ಈ ವಿವಾದ ಈಗ ಮತ್ತೆ ಮುನ್ನೆಲೆಗೆ ಬಂದಿದೆ. ಅಧ್ಯಯನ ಸಮಿತಿಯ ಮುಖ್ಯಸ್ಥರಾಗಿದ್ದ ನ್ಯಾ. ನಾಗಮೋಹನ್ ದಾಸ್ ಅವರೇ ಈ ಬಗ್ಗೆ ಹೇಳಿಕೆ ನೀಡಿರುವುದು ಹೊದ ಚರ್ಚೆಗಳನ್ನು ಹುಟ್ಟು ಹಾಕಿದೆ.

ವೇದಿಕೆಯಲ್ಲಿ ನಾಡಿನ ಬಹುತೇಕ ಮಠಾಧೀಶರು, ಪ್ರಭಾವಿ ಹಾಗೂ ಪ್ರಮುಖ ನಾಯಕರು ಭಾಗವಹಿಸಿದ್ದರು. ನಾಗಮೋಹನ್‌ದಾಸ್ ಹೇಳಿಕೆಗೆ ಚಪ್ಪಾಳೆ ತಟ್ಟಿ ಸ್ವಾಗತಿಸಲಾಯಿತು.

ಬಸವ ಸಂಸ್ಕೃತಿ ಅಭಿಯಾನದ ಸಮಾರೋಪ ಸಮಾರಂಭದ ವೇದಿಕೆಯಲ್ಲಿ ಪ್ರಾಸ್ತಾವಿಕ ಮಾತನಾಡಿದ ಜಾಗತಿಕ ಲಿಂಗಾಯತ ಮಹಾ ಸಭಾದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಡಾ. ಎಸ್. ಎಂ. ಜಾಮದಾರ್, ಲಿಂಗಾಯತ ಧರ್ಮದ ಅಲ್ಪಸಂಖ್ಯಾತ ಸ್ಥಾನಮಾನ ಹೋರಾಟವನ್ನು ಸರಿಸಿಕೊಂಡರು.

ಆಗ್ನೇಯ ಪದವೀಧರರ ಕ್ಷೇತ್ರ, ಮತದಾರರ ಪಟ್ಟಿ ಪರಿಷ್ಕರಣೆ

2022 ನವೆಂಬರ್ ಪೂರ್ವ ಪದವೀಧರರು ಅರ್ಹ : ಜಿ.ಎಂ.ಗಂಗಾಧರಸ್ವಾಮಿ

ದಾವಣಗೆರೆ : ಆಗ್ನೇಯ ಪದವೀಧರರ ಕ್ಷೇತ್ರದ ಮತದಾರರ ಪಟ್ಟಿ ಸಿದ್ದಪಡಿಸುವ ಕೆಲಸ ಆರಂಭವಾಗಿದ್ದು 2025 ರ ನವೆಂಬರ್ 1 ಕ್ಕೆ ಮೂರು ವರ್ಷಗಳ ಹಿಂದೆ ಯಾವುದೇ ಅಂಗೀಕೃತ ವಿಶ್ವವಿದ್ಯಾಲಯದಿಂದ ಪಡೆದ ಪದವಿ ಅಂಕಪಟ್ಟಿ ಅಥವಾ ಪದವಿ ಉತ್ತೀರ್ಣ ಪ್ರಮಾಣ ಪತ್ರವನ್ನು ನಿಗದಿತ ನಮೂನೆಯೊಂದಿಗೆ ಮತದಾರರ ನೊಂದಣಿ ಅಧಿಕಾರಿಗಳಿಗೆ ಸಲ್ಲಿಸಿ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ ಮಾಡಬೇಕೆಂದು ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದರು.

ಅವರು ಶನಿವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕುರಿತಂತೆ ಮಾತನಾಡಿದರು. ಆಗ್ನೇಯ ಪದವೀಧರರ ಕ್ಷೇತ್ರದ ವ್ಯಾಪ್ತಿಗೆ ದಾವಣಗೆರೆ, ಹರಿಹರ ಹಾಗೂ ಜಗಳೂರು ತಾಲ್ಲೂಕುಗಳು ಒಳಪಡುತ್ತವೆ. ಈ ತಾಲ್ಲೂಕು ವ್ಯಾಪ್ತಿಯಲ್ಲಿ ಕನಿಷ್ಠ 6 ತಿಂಗಳಿಗಿಂತಲೂ ಹೆಚ್ಚಿನ ಅವಧಿಯಲ್ಲಿ ಖಾಯಂ ನಿವಾಸಿಯಾಗಿದ್ದಲ್ಲಿ ಆಗ್ನೇಯ ಪದವೀಧರರ ಕ್ಷೇತ್ರದ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನಮೂನೆ–18 ರಲ್ಲಿ ಭರ್ತಿ ಮಾಡಿ ನಿವಾಸಿ ಸ್ಥಾನದ 11 ದಾಖಲೆಗಳಲ್ಲಿ ಒಂದನ್ನು ಹಾಗೂ ಪದವಿ ಉತ್ತೀರ್ಣ ದಾಖಲೆಗಳೊಂದಿಗೆ ತಮ್ಮ ಹೆಸರನ್ನು ತಹಶೀಲ್ದಾರರ ಕಚೇರಿ, ಪಾಲಿಕೆ ವ್ಯಾಪ್ತಿಯಲ್ಲಿ ಬರುವವರು ಮಹಾನಗರಪಾಲಿಕೆ ಆಯುಕ್ತರ ಚುನಾವಣಾ ಶಾಖೆಗೆ ಮತ್ತು ದಾವಣಗೆರೆ ತಾಲ್ಲೂಕು ಗ್ರಾಮೀಣ ಪ್ರದೇಶಕ್ಕೆ ಸೇರಿದವರು ದಾವಣಗೆರೆ ತಾಲ್ಲೂಕು ಕಚೇರಿಗೆ ಸಲ್ಲಿಸಬೇಕು.

ಚುನಾವಣಾ ಆಯೋಗವು ಆಗ್ನೇಯ ಪದವೀಧರರ ಕ್ಷೇತ್ರದ ಮತದಾರರ ಪಟ್ಟಿ ಪರಿಷ್ಕರಣೆಗೆ ಸೆಪ್ಟೆಂಬರ್ 30 ರಂದು ಅಧಿಸೂಚನೆ ಹೊರಡಿಸಿದ್ದು ನಮೂನೆ 18 ರೊಂದಿಗೆ ನೊಂದಣಿಗೆ ನವೆಂಬರ್ 6 ರೊಳಗಾಗಿ ಸಲ್ಲಿಸಬೇಕು. ನವೆಂಬರ್ 25 ರಂದು ಕರಡು ಮತದಾರರ ಪಟ್ಟಿ ಪ್ರಕಟಿಸಲಾಗುತ್ತದೆ. ಕರಡು ಮತದಾರರ ಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ಡಿಸೆಂಬರ್ 10 ರೊಳಗಾಗಿ ಸಲ್ಲಿಸಬೇಕು. ನಂತರ ಡಿಸೆಂಬರ್ 30 ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುತ್ತದೆ.

ಪದವೀಧರ ಕ್ಷೇತ್ರದ ಮತದಾರರಾಗಲು 2022 ರ ನವೆಂಬರ್ 1 ಕ್ಕೂ ಪೂರ್ವ ಅಥವಾ 2025 ರ ನವೆಂಬರ್ 1 ಕ್ಕೆ 3 ವರ್ಷಗಳ ಹಿಂದೆ ಪದವಿ ಉತ್ತೀರ್ಣರಾಗಿರಬೇಕು. ಇವರು ಮಾತ್ರ ಮತದಾರರಾಗಲು ಅರ್ಹತೆ ಪಡೆಯುತ್ತಾರೆ.

ಮತದಾರರ ಪಟ್ಟಿ ಸಿದ್ದತೆಗಾಗಿ ಸಹಾಯಕ ನೊಂದಣಾಧಿಕಾರಿಗಳನ್ನು ನೇಮಕ ಮಾಡಲಾಗಿದೆ. ಜಿಲ್ಲಾಧಿಕಾರಿಗಳು ಸಹಾಯಕ ಮತದಾರರ ನೊಂದಣಾಧಿಕಾರಿಯಾಗಿದ್ದು ದಾವಣಗೆರೆ, ಹರಿಹರ, ಜಗಳೂರು ತಾಲ್ಲೂಕುಗಳಿಗೆ ಸಂಬಂಧಿಸಿದಂತೆ 08192–234640, 7259700555, ದಾವಣಗೆರೆ ಗ್ರಾಮಾಂತರಕ್ಕೆ ಉಪವಿಭಾಗಾಧಿಕಾರಿ ಸಂತೋಷ ಕುಮಾರ್ 08192–272955, 9845482973, ದಾವಣಗೆರೆ ನಗರ ಉತ್ತರ ಮತ್ತು ಕಸಬಾ ಹೋಬಳಿ ವ್ಯಾಪ್ತಿಗೆ ಮಮತಾ ಹೊಸಗೌಡರ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ 99480863001, ಮಹಾನಗರ ಪಾಲಿಕೆ ವ್ಯಾಪ್ತಿಗೆ ಆಯುಕ್ತರಾದ ರೇಣುಕಾ ಇವರ ಮೊಬೈಲ್ 9902982111, ಹರಿಹರ ತಾಲ್ಲೂಕಿಗೆ ದೂಡಾ ಆಯುಕ್ತರಾದ ಹುಲಿಮನಿ ತಿಮ್ಮಣ್ಣ 9538302836, ಜಗಳೂರು ತಾಲ್ಲೂಕಿಗೆ ಸಹಕಾರ ಸಂಘಗಳ ಉಪನಿಬಂಧಕ ಮಧು ಶ್ರೀನಿವಾಸ್.ಟಿ ಇವರು ಸಹಾಯಕ ನೊಂದಣಾಧಿಕಾರಿಯಾಗಿದ್ದು ಹೆಚ್ಚಿನ ಮಾಹಿತಿಗೆ ಇವರ ಮೊಬೈಲ್ 9945979177 ಸಂಖ್ಯೆಗೆ ಕರೆ ಮಾಡಬಹುದಾಗಿದೆ ಎಂದರು.

ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಯಲ್ಲಿ ಶೇ 75 ರಷ್ಟು ಪ್ರಗತಿ; ಹಿಂದುಳಿದ ವರ್ಗಗಳ ಆಯೋಗದಿಂದ ನಡೆಸಲಾಗುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯು ಜಿಲ್ಲೆಯಲ್ಲಿ ಶೇ 75 ರಷ್ಟು ಪ್ರಗತಿಯಾಗಿದ್ದು ರಾಜ್ಯದಲ್ಲಿ 5 ನೇ ಸ್ಥಾನದಲ್ಲಿದೆ. ಸಮೀಕ್ಷೆದಾರರಿಗೆ ಉಂಟಾದ ಕೆಲವು ತಾಂತ್ರಿಕ ಅನುಮಾನಗಳಿಂದ ಕಳೆದೆರಡು ದಿನಗಳಲ್ಲಿ ಸಮೀಕ್ಷೆ ಕುಂಟಿತವಾಗಿದ್ದು ಅವೆಲ್ಲಾ ಅಡೆತಡೆಗಳನ್ನು ನಿವಾರಿಸಲಾಗಿದೆ ಎಂದರು.

ಗಣತಿ ಸರ್ವ ಜಾತಿ ಪ್ರಗತಿಗೆ ಬುನಾದಿ

ಜಾತಿ ನಿರ್ಲಕ್ಷಿಸಿದರೆ ಸಮುದಾಯಕ್ಕೆ ಅನ್ಯಾಯ : ಹೆಚ್.ಆಂಜನೇಯ

ಹೊಳಲ್ಕೆರೆ:ಅ.5 : ರಾಜ್ಯದಲ್ಲಿ ಆರಂಭವಾಗಿರುವ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆ ನಾಡಿನ ಪ್ರಗತಿಗೆ ಬುನಾದಿ ಆಗಲಿದೆ ಎಂದು ಮಾಜಿ ಸಚಿವ ಹೆಚ್. ಆಂಜನೇಯ ಹೇಳಿದರು.



ತಾಲೂಕಿನ ಬಿ.ದುರ್ಗದಲ್ಲಿ ಗಣತಿದಾರರೊಂದಿಗೆ ಮನೆ ಮನೆಗೆ ಭೇಟಿ ನೀಡಿದ ಬಳಿಕ ಆಯೋಜ

ರಾಶಿ ಭವಿಷ್ಯ

ಮೇಷ ರಾಶಿ

ನಿಮ್ಮ ಸಂಗಾತಿಯ ಅಹ್ಲಾದಕರ ಮನಸ್ಥಿತಿ ನಿಮ್ಮ ದಿನವನ್ನು ಉಜ್ವಲವಾಗಿಸಬಹುದು. ದಿನದಆರಂಭವು ಚೆನ್ನಾಗಿ ಅಗಿದರು, ಸಂಜೆಯ ಸಮಯದಲ್ಲಿ ಯಾವುದೇ ಕಾರಣದಿಂದ ನಿಮ್ಮ ಹಣ ಖರ್ಚಾಗಬಹುದು. ಇದರಿಂದ ನೀವು ತೊಂದರೆಗೊಳಗಾಗಬಹುದು. ಗುಂಪಿನಲ್ಲಿದ್ದಾಗ ನೀವೇನು ಹೇಳುತ್ತೀರೆಂದು ಎಚ್ಚರ ವಹಿಸಿ–ನಿಮ್ಮ ಹಠಾತ್ ಟೀಕೆಗಳಿಗೆ ನೀವು ತೀವ್ರವಾಗಿ ಟೀಕೆ ಎದುರಿಸಬೇಕಾಗಬಹುದು. ವೈಯಕ್ತಿಕ ಮಾರ್ಗದರ್ಶನ ನಿಮ್ಮ ಸಂಬಂಧವನ್ನು ಸುಧಾರಿಸುತ್ತದೆ.

ವೃಷಭ ರಾಶಿ

ಹೆಚ್ಚು ಆಶಾವಾದಿಗಳಾಗಿರಲು ನಿಮ್ಮನ್ನು ನೀವೇ ಪ್ರೇರೇಪಿಸಿಕೊಳ್ಳಿ. ಇದು ವಿಶ್ವಾಸ ಮತ್ತು ನಮ್ಯತೆಯನ್ನು ಹೆಚ್ಚಿಸುತ್ತದಾದರೂ ಅದೇ ಸಮಯದಲ್ಲಿ ಭಯ, ದ್ವೇಷ, ಅಸೂಯೆ, ಸೇಡಿನಂಥ ನಕಾರಾತ್ಮಕ ಭಾವನೆಗಳನ್ನು ಹಿಂದೆ ಬಿಡಲು ಸಿದ್ಧವಾಗಿ. ಚಂದ್ರನ ಸ್ಥಾನದಿಂದಾಗಿ, ಇಂದು ನಿಮ್ಮ ಹಣವನ್ನು ಅನಗತ್ಯ ಕೆಲಸಗಳಿಗೆ ಖರ್ಚು ಮಾಡಬಹುದು. ನೀವು ಹಣವನ್ನು ಸಂಗ್ರಹಿಸಲು ಬಯಸಿದರೆ ನಿಮ್ಮ ಸಂಗಾತಿಯೊಂದಿಗೆ ಅಥವಾ ಪೋಷಕರೊಂದಿಗೆ ಮಾತನಾಡಿ.

ಮಿಥುನ ರಾಶಿ

ಇಂದು ನಿಮ್ಮ ವಿಶ್ವಾಸ ಬೆಳೆಯುತ್ತದೆ ಮತ್ತು ಪ್ರಗತಿ ನಿಶ್ಚಿತವಾಗಿದೆ. ಹೆಚ್ಚುವರಿ ಹಣವನ್ನು ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಮಾಡಬೇಕು. ನೀವು ಕುಟುಂಬದ ಸದಸ್ಯರ ಜೊತೆ ಸ್ವಲ್ಪ ತೊಂದರೆ ಹೊಂದಿದ್ದರೂ ಇದು ನಿಮ್ಮ ಮನಶ್ಶಾಂತಿಯನ್ನು ಹಾಳು ಮಾಡಲು ಅವಕಾಶ ನೀಡಬೇಡಿ. ಡೇಟ್ ಕಾರ್ಯಕ್ರಮ ವಿಫಲವಾಗಬಹುದಾದ್ದರಿಂದ ನಿರಾಶೆಯಾಗಬಹುದು. ದೇಶಿ ವ್ಯಾಪಾರಕ್ಕೆ ಸೇರಿರುವ ಜನರು, ಇಂದು ಅವರು ಅಪೇಕ್ಷಿತ ಫಲಿತಾಂಶವನ್ನು ಪಡೆಯುವ ಸಂಪೂರ್ಣ ಭರವಸೆ ಇದೆ.

ಕರ್ಕ ರಾಶಿ

ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ವಿದೇಶಿ ಸಂಪರ್ಕಗಳನ್ನು ಹೊಂದಿರುವ ವ್ಯಾಪಾರಿಗಳಿಗೆ ಇಂದು ಹಣದ ನಷ್ಟವಾಗುವ ಸಾಧ್ಯತೆ ಇದೆ ಆದ್ದರಿಂದ ಇಂದು ಯೋಚಿಸಿ ಅರ್ಥಮಾಡಿಕೊಂಡು ನಡೆಯಿರಿ ಮನೆಯ ಕೆಲಸ ಸುಸ್ತು ಮಾಡುತ್ತದೆ ಮತ್ತು ನಿಮ್ಮನ್ನು ಮಾನಸಿಕ ಒತ್ತಡದಲ್ಲಿರಿಸುತ್ತದೆ. ನಿಮ್ಮ ಗೆಳತಿ ನಿಮಗೆ ಮೋಸ ಮಾಡಬಹುದು.

ಸಿಂಹ ರಾಶಿ

ಸ್ವಲ್ಪ ಮನರಂಜನೆಗಾಗಿ ನಿಮ್ಮ ಕಚೇರಿಯಿಂದ ಬೇಗನೇ ಹೆಣಟಿಜಜಜಿಟಿಜಜರಬರಲು ಪ್ರಯತ್ನಿಸಿ. ಪ್ರಾಚೀನ ವಸ್ತುಗಳು ಮತ್ತು ಆಭರಣಗಳಲ್ಲಿ ಹೂಡಿಕೆ ಲಾಭ ಮತ್ತು ಸಮೃದ್ಧಿ ತರುತ್ತದೆ. ನಿಮ್ಮ ನಾಲಗೆ ನಿಮ್ಮ ಅಜ್ಜ ಅಜ್ಜಿಯಂದಿರ ಭಾವನೆಗಳಿಗೆ ಫಾಸಿ ಮಾಡುವುದರಿಂದ ನಿಮ್ಮ ಭಾಷೆಯನ್ನು ನಿಯಂತ್ರಿಸಿ. ಹರಟೆ ನಿಮ್ಮ ಸಮಯ ವ್ಯರ್ಥ ಮಾಡುವುದಕ್ಕಿಂತ ಸುಮ್ಮನಿರುವುದು ಉತ್ತಮ. ನಾವು ಬುದ್ಧಿವಂತ ಚಟುವಟಿಕೆಗಳ ಮೂಲಕ ಜೀವನಕ್ಕೆ ಅರ್ಥ ನೀಡುತ್ತೇವೆಂದು ನೆನಪಿಡಿ.

ಕನ್ಯಾ ರಾಶಿ

ಕೆಲವು ಕುಟುಂಬದ ಸದಸ್ಯರು ತಮ್ಮ ಅಸೂಯೆಯ ವರ್ತನೆಯಿಂದ ನಿಮಗೆ ಕಿರಿಕಿರಿ ಮಾಡಬಹುದು. ಆದರೆ ತಾಳ್ಮೆ ಕಳೆದುಕೊಳ್ಳುವುದು ಬೇಡ. ಇಲ್ಲದಿದ್ದರೆ ಪರಿಸ್ಥಿತಿ ನಿಯಂತ್ರಣ ಮೀರಬಹುದು. ಗುಣಪಡಿಸಲಾರದ್ದನ್ನು ತಡೆದುಕೊಳ್ಳಬೇಕು ಎಂದು ನೆನಪಿಡಿ. ನೀವು ಜೀವನದಲ್ಲಿ ಹಣದ ಪ್ರಾಮುಖ್ಯತೆಯನ್ನು ಅರ್ಥಮಾಡಿಕೊಳ್ಳುವುದಿಲ್ಲ ಆದರೆ ಇಂದು ನೀವು ಹಣದ ಮೌಲ್ಯವನ್ನು ಅರ್ಥಮಾಡಿಕೊಳ್ಳಬಹುದು ಏಕೆಂದರೆ ಇಂದು ನಿಮಗೆ ಹಣದ ಅಗತ್ಯವಿರುತ್ತದೆ ಆದರೆ ನಿಮ್ಮ ಸಾಕಷ್ಟು ಹಣ ಇರುವುದಿಲ್ಲ.

ತುಲಾ ರಾಶಿ

ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ಇಂದು ನೀವು ಸಾಲ ಪಡೆಯಬಹುದು. ಕೌಟುಂಬಿಕ ಜವಾಬ್ದಾರಿಗಳು ಹೆಚ್ಚಾಗುತ್ತವೆ ಇವು ನಿಮ್ಮ ಮನಸ್ಸಿನ ಮೇಲೆ ಒತ್ತಡ ತರುತ್ತವೆ. ನಿಮ್ಮ ಪ್ರೀತಿಪಾತ್ರರ ನಿಷ್ಠೆಯನ್ನು ಅನುಮಾನಿಸಬೇಡಿ.

ವೃಶ್ಚಿಕ ರಾಶಿ

ಸಂಗಾತಿಯ ಆರೋಗ್ಯಕ್ಕೆ ಸೂಕ್ತ ರಕ್ಷಣೆ ಮತ್ತು ಗಮನದ ಅಗತ್ಯವಿದೆ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ನಿಮ್ಮ ಸಹೋದರನಿಗೆ ವಿಷಯಗಳನ್ನು ನಿಯಂತ್ರಣದಲ್ಲಿರಿಸಿಕೊಳ್ಳಲು ಸಹಾಯ ಮಾಡಿ. ವ್ಯಾಜ್ಯಗಳನ್ನು ಅನಗತ್ಯವಾಗಿ ಹೆಚ್ಚಿಸದೇ ಅವುಗಳನ್ನು ಸೌಹಾರ್ದತೆಯಿಂದ ಪರಿಹರಿಸಲು ಪ್ರಯತ್ನಿಸಿ. ನಿಮ್ಮ ಪ್ರೇಮ ಜೀವನ ಶರದೃತುವಿನಲ್ಲಿನ ಮರದ ಎಲೆಯಂತಿರುತ್ತದೆ.

ಧನು ರಾಶಿ

ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ, ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಬ್ಬಾಗಿಲಾಗಿದೆ. ಇದು ಜೀವನದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಹಾಯ ಮಾಡುತ್ತದೆ ಮತ್ತು ಅಗತ್ಯವಿರುವ ಬೆಳಕನ್ನು ನೀಡುತ್ತದೆ.

ಮಕರ ರಾಶಿ

ಜನರಲ್ಲಿ ಬೆರೆಯುವ ಭಯ ನಿಮ್ಮನ್ನು ಧೈರ್ಯಗೆಡಿಸಬಹುದು. ಇದನ್ನು ತೆಗೆದುಹಾಕಲು ನಿಮ್ಮ ಸ್ವಾಭಿಮಾನವನ್ನು ಪ್ರೋತ್ಸಾಹಿಸಿ. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ಭಾವನಾತ್ಮಕ ಭರವಸೆಗಳನ್ನು ಬಯಸುವವರು ಹಿರಿಯರು ಅವರ ನೆರವಿಗೆ ಬರುವುದನ್ನು ನೋಡಬಹುದು. ಪ್ರಣಯ ನಿಮ್ಮ ಹೃದಯ ಮತ್ತು ಮನಸ್ಸನ್ನು ಆಳುತ್ತದೆ.

ಕುಂಭ ರಾಶಿ

ನೀವು ಭಯವೆಂಬ ದೈತ್ಯನ ಜೊತೆ ಹೋರಾಡಲು ಸಿದ್ಧವಾಗುತ್ತಿದ್ದ ಹಾಗೆ ನಿಮ್ಮ ಆಲೆಲೋಚನೆಗಳನ್ನು ಸಕಾರಾತ್ಮಕವಾಗಿ ರೂಪಿಸಿಕೊಳ್ಳಿ, ಇಲ್ಲದಿದ್ದಲ್ಲಿ ನೀವು ಈ ರಾಕ್ಷಸನಿಗೆ ಒಬ್ಬ ಜಡ ಮತ್ತು ನಿಷ್ಕರುಣೆಯ ಬಲಿಯಾಗುತ್ತೀರಿ. ಡೈರಿ ಉದ್ಯಮಕ್ಕೆ ಸೇರಿರುವವರು ಇಂದು ಆರ್ಥಿಕ ಲಾಭವನ್ನು ಪಡೆಯುವ ಪ್ರಬಲ ಸಾಧ್ಯತೆ ಇದೆ. ಕೆಲಸದ ಒತ್ತಡ ನಿಮ್ಮ ಮನಸ್ಸನ್ನು ಆವರಿಸುತ್ತದೆ ಹಾಗೂ ಇದು ಕುಟುಂಬ ಮತ್ತು ಸ್ನೇಹಿತರಿಗೆ ಯಾವುದೇ ಸಮಯವಿಲ್ಲದಂತೆ ಮಾಡುತ್ತದೆ.

ಮೀನ ರಾಶಿ

ಪ್ರತಿ ವ್ಯಕ್ತಿಯನ್ನೂ ಆಲಿಸಿ ನಿಮ್ಮ ಸಮಸ್ಯೆಗಳಿಗೆ ಪರಿಹಾರ ದೊರಕಬಹುದು. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು. ನೀವು ಕಛೇರಿಯಲ್ಲಿ ಹೆಚ್ಚು ಸಮಯ ಕಳೆದರೆ ನಿಮ್ಮ ಮನೆಯ ಜೀವನಕ್ಕೆ ಹಾನಿಯಾಗಬಹುದು. ಪ್ರೀತಿ ಕೇವಲ ವಸಂತ; ಹೂಗಳು, ಗಾಳಿ, ಬಿಸಿಲು, ಚಿಟ್ಟೆಗಳು. ನೀವು ಇಂದು ಪ್ರಣಯದ ಕಚಗುಳಿಯನ್ನು ಅನುಭವಿಸುತ್ತೀರಿ.

ಬಸವಣ್ಣನವರ ಪ್ರಚಾರದ ಆರ್ಭಟದಲ್ಲಿ " ಸಾಧರ "ಸಮಾಜದ ಮೂಲ ಪುರುಷ ಶ್ರೀ ವಿಶ್ವಬಂಧು ಮರುಳಸಿದ್ದ ನನ್ನು ಮರೆಯುತ್ತಿದ್ದಾರೆಯೇ ಸಾಧರ ಸಮಾಜದವರು.....?

ದಾವಣಗೆರೆ: ಬಸವಣ್ಣ & ವಿಶ್ವಬಂಧು ಮರುಳಸಿದ್ದರು ಸಮಕಾಲೀನರು ಇರಬಹುದು.

ಈ ಇಬ್ಬರಿಗಿಂತ ಮುಂಚೆ ಸಮಾಜದಲ್ಲಿ ಇದ್ದ ಅಂದರೆ ವರ್ಣಾಶ್ರಮ ಪದ್ಧತಿ ಇದ್ದ ಕಾಲದಲ್ಲಿ ನಾವುಗಳೆಲ್ಲರೂ ಶೂದ್ರರು.

ಅಂದು ಶೂದ್ರ ಪಂಗಡದಲ್ಲಿ ಸಾದರು,ಮಾದಿಗ ರು,ಕುರುಬರು,ತಳವಾರರು,ಸಮಗಾರರು, ಬೋವಿ/ ಒಡ್ಡರು, ಲಂಬಾಣಿ ಗಳು, ಚಲುವಾದಿಗಳು ಮತ್ತು ಇಂದಿನ ಸುಮಾರು 102 ಲಿಂಗಾಯಿತ ಒಳ ಪಂಗಡದವರು ಮತ್ತು ಇತರೆ ಹಲವು ವರ್ಗದವರು ಇದ್ದರು ಎಂಬುವುದು ಇತಿಹಾಸ.

*ಆಗ ಕಗ್ಗಲ್ಲುಪುರದ ಕಗ್ಗಲ್ಲಗೌಡರಾದ ಬಾಚಣ್ಣ ಗೌಡರೆಂಬ "ಸಾಧರ " ಮನೆಯಲ್ಲಿ ಸಾಕುಮಗನಾಗಿದ್ದ

ಮರುಳಸಿದ್ದರು* ಗುರು ರೇವಣಸಿದ್ಧರಿಂದ ಲಿಂಗ ಧೀಕ್ಷೆ ಪಡೆದುಕೊಂಡರು. ಆ ನಂತರ ಇದೇ ನಮ್ಮ ಮರುಳಸಿದ್ದರು 12 ನೇ ಶತಮಾನದಲ್ಲಿದ್ದ ಮಹಿಳಾ ವಚನಗಾರ್ಥಿ ಅಕ್ಕ ಮಹಾದೇವಿ ಯವರಿಗೆ ಲಿಂಗ ಧೀಕ್ಷೆ ಕೊಟ್ಟರು ಎಂದು ಇತಿಹಾಸ ಹೇಳುತ್ತದೆ. ಆ ನಂತರ ಇದೇ ಮರುಳಸಿದ್ದರು ಅಂದು ಶೂದ್ರ ವರ್ಗದಲ್ಲಿದ್ದ

" ಸಾಧರ " ಸಮಾಜದ ತೆಲುಗು ಬಾಳು ಶಿದ್ದೇಶ್ವರ ನಿಗೆ ಲಿಂಗ ಧೀಕ್ಷೆ ಕೊಟ್ಟು ಸದ್ದರ್ಮ ಪೀಠದಲ್ಲಿ ಕೂರಿಸಿ "ತರಳಾ ಬಾಳು "ಎಂದು ಹರಸಿ ಆಶೀರ್ವಧಿಸಿದರು ಎಂಬ ಇತಿಹಾಸ ಇದೆ.

ಆದರೆ ಇಲ್ಲಿ ಎರಡು ಪ್ರಶ್ನೆಗಳು ಎದುರಾಗುತ್ತವೆ.

ಆ ಪ್ರಶ್ನೆಗಳೇನೆಂದರೆ:

1) ಅಂದು ಶೂದ್ರ ವರ್ಗದಲ್ಲಿದ್ದ

" ಸಾದರು " ಸಮಾಜಕ್ಕೆ ಲಿಂಗ ಧೀಕ್ಷೆ ಕೊಟ್ಟವರು ಸಾಧರ ಸಮಾಜದ ಮೂಲ ಪುರುಷ ನಾದ ವಿಶ್ವಬಂಧು ಮರುಳಸಿದ್ದರೋ ಅಥವಾ ಬಸವಣ್ಣನವರೋ ಎಂಬುವುದು.

2) ಸಾಧರಿಗೆ ವಿಶ್ವಬಂಧು ಮರುಳಸಿದ್ದರು ಪ್ರೇರಣೇಯೋ ಅಥವಾ ಬಸವಣ್ಣನು ಪ್ರೇರಣೆಯೋ?

ಕಾರಣ ಇಂದು ನಮ್ಮ

" ಸಾಧರ " ಸಮಾಜ ಎತ್ತ ಸಾಗುತ್ತದೆ ಎಂಬುದೇ ಒಂದು ಯಕ್ಷ ಪ್ರಶ್ನೆಯಾಗಿದೆ.

ಬಸವಣ್ಣನವರ ಪ್ರಚಾರದ ಆರ್ಭಟದಲ್ಲಿ " ಸಾಧರ " ಮೂಲ ಪುರುಷ ಶ್ರೀ ವಿಶ್ವಬಂಧು ಮರುಳಸಿದ್ದ ನನ್ನೇ ಮರೆಯುತ್ತಿದ್ದೇವೆ ಅನಿಸುತ್ತಿದೆ ಅಲ್ಲವೇ ? ಕೇವಲ ತರಳಬಾಳು ಹುಣ್ಣಿಮೆಯ ದಿವಸ ಮಾತ್ರ ಮರುಳಸಿದ್ದ ನೆನಪಿಗೆ ಬರುತ್ತಾನೆ ನಂತರದ ದಿನಗಳಲ್ಲಿ ನೆನಪಿಗೆ ಬರುವುದಿಲ್ಲ ಏಕೆ?

ಬಸವಣ್ಣನ ಹಾಗೆ ಮರುಳಸಿದ್ದನೂ ಸಹ ಸಮಾಜದಲ್ಲಿ ಬೇರೂರಿದ್ದ ಜಾತಿಭೇದ, ಲಿಂಗ ಭೇದ, ಅಸಮಾನತೆ, ತಾರತಮ್ಯ, ಮೌಢ್ಯತೆ, ಅಂಧಕಾರ, ಕಂದಾಚಾರ,ಅಂದಶ್ರದ್ಧೆ, ಪ್ರಾಣಿ ಬಲಿ ಇನ್ನೂ ಇತ್ಯಾದಿ ಮೂಢ ನಂಬಿಕೆಗಳ ವಿರುದ್ಧ ಏಕಾಂಗಿ ಯಾಗಿ ಅಂದಿನ ಪಟ್ಟಭದ್ರರ ವಿರುದ್ಧ ಹೋರಾಡಿ ಕಷ್ಟ ಗಳನ್ನು ಅನುಭವಿಸಿ ಜಯಗಳಿಸಿದ್ದಲ್ಲದೆ,ಮುಂದೆಯೂ ಇವುಗಳ ವಿರುದ್ಧ ಹೋರಾಡಲು ಒಂದು ಸದ್ದರ್ಮ ಪೀಠ ಸ್ಥಾಪಿಸಿದ ಸಿದ್ಧಿ ಪುರುಷ. ಹಾಗಾಗಿ ಇಂತಹ

ಮರುಳಸಿದ್ದನ ಬಗ್ಗೆ ಮೊದಲು ಹೆಚ್ಚು ಹೆಚ್ಚು ಸಂಶೋಧನೆ ಗಳಾಗಬೇಕಿದೆ. ಸಂಶೋಧನೆ ಮಾಡಿದರೆ ಅವನ ವಚನಗಳು, ಬರವಣಿಗೆಗಳು,ಶಾಸನಗಳು ಸಿಗಬಹುದು.

ಉಜ್ಜಿನಿಯಲ್ಲಿರುವ ಸಿದ್ಧಪ್ಪನ ದೇವಸ್ಥಾನದ ಶಿಖರಕ್ಕೆ ಎಣ್ಣೆ ಎರೆಯುತ್ತಿರುವುದರಿಂದ ಆ ಶಿಖರದಲ್ಲಿ ಮರುಳಸಿದ್ದನಿಗೆ ಸಂಬಂದಿಸಿದ ಕೆತ್ತನೆಗಳು, ಬರವಣಿಗೆಗಳು ಮುಚ್ಚಿರಬಹುದಲ್ಲವೇ? ಹಾಗೆ ಅಂದುಕೊಳ್ಳಬಹುದಲ್ಲವೇ?

ಆ ಶಿಖರವನ್ನು ಸ್ವಚ್ಛ ಮಾಡಿಸಿದರೆ ಮರುಳಸಿದ್ದನ ಬಗ್ಗೆ ಇನ್ನಷ್ಟು ಮಾಹಿತಿ ಸಿಗಬಹುದು. ಏಕೆಂದರೆ ಹಿಂದಿನ ಕೆಲ ಪಟ್ಟಭದ್ರರು ಮರುಳಸಿದ್ದನ ಇತಿಹಾಸ ಗೊತ್ತಾಗಬಾರದೆಂದು ಬೇಕಂತಲೇ ಶಿಖರಕ್ಕೆ ಎಣ್ಣೆ ಎರೆಯುವ ಮೌಢ್ಯ ಪದ್ಧತಿಯನ್ನು ರೂಢಿ ಮಾಡಿರಬಹುದಲ್ಲವೇ? ಆದ್ದರಿಂದ ಸಾಧರು ಇದರ ಬಗ್ಗೆ ಚರ್ಚೆ ಮಾಡುವಂತಾಗಲಿ ಎಂದು ಆಶಿಸುತ್ತೇವೆ.

ಇಂತೀ ಸಾಧರ ಸಮಾಜದ ಹಿತೈಷಿ :
–ಕೊಂಡಜ್ಜಿ ಶಿವಕುಮಾರ
ವಕೀಲರು
ದಾವಣಗೆರೆ
Mob : 9980184766

ಜಿಲ್ಲಾ ಮಟ್ಟದ ವಿಶ್ವ ರೇಬಿಸ್ ದಿನಾಚರಣೆ ಮತ್ತು ವಿಶ್ವ ಹೃದಯ ದಿನಾಚರಣೆ

ಗದಗ : ವಿಶ್ವ ರೇಬಿಸ್ ದಿನ ಹಾಗೂ ವಿಶ್ವ ಹೃದಯ ದಿನದ ಅಂಗವಾಗಿ ಅಕ್ಟೋಬರ್ 03 ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಮೀಕ್ಷಣಾ ಘಟಕ, ಜಿಲ್ಲಾ ಮಾಹಿತಿ ಶಿಕ್ಷಣ ಮತ್ತು ಸಂವಹನ ವಿಭಾಗ, ತಾಲೂಕ ಆರೋಗ್ಯಾಧಿಕಾರಿಗಳ ಕಚೇರಿ, ಮುಂಡರಗಿ ಹಾಗೂ ಶ್ರೀ ಜಗದ್ಗುರು ತೋಂಟದಾರ್ಯ ಸರಕಾರಿ ಪ್ರಥಮ ದರ್ಜೆ ಕಾಲೇಜ್, ಮುಂಡರಗಿಯ ಇವರ ಸಂಯುಕ್ತ ಆಶ್ರಯದಲ್ಲಿ ಆಚರಿಸಲಾಯಿತು.

ಜಿಲ್ಲಾ ಸಮೀಕ್ಷಣಾಧಿಕಾರಿಗಳಾದ ಡಾ.ವೆಂಕಟೇಶ ರಾಠೋಡ್ ರವರು ಮಾತನಾಡಿ ರೇಬಿಸ್ ಒಂದು ವೈರಾಣುವಿನಿಂದ ಹರಡುವ ಮಾರಕ ಖಾಯಿಲೆ ಇದ್ದು, ಇದರ ತಡೆಗಟ್ಟುವಿಕೆ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಈ ರೋಗವನ್ನು ಸೋಲಿಸುವಲ್ಲಿ ಪ್ರಗತಿಯನ್ನು ಸಾಧಿಸಲು ಈ ದಿನವನ್ನು ವಾರ್ಷಿಕವಾಗಿ ಆಚರಿಸಲಾಗುತೆದೆ ಎಂದರು

ರೇಬಿಸ್ ಲಸಿಕೆಯನ್ನು ಅಭಿವೃದ್ಧಿಪಡಿಸಿದ ಸೂಕ್ಷ ಜೀವ ಶಾಸ್ತ್ರಜ್ಞ ಲೂಯಿಸ್ ಪಾಅವರ ಮರಣದ ವಾರ್ಷಿಕೋತ್ಸವವನ್ನು ವಿಶ್ವ ರೇಬಿಸ್ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ. ಪ್ರತಿ ವರ್ಷದಂತೆ ಈ ವರ್ಷದಲ್ಲಿ ರೇಬಿಸ್ ತಡೆಗಟ್ಟಲು ಮುಂದಾಗೋಣ ನೀವು ನಾನು ನಮ್ಮ ಸಮಾಜ ಎಂಬ ಘೋಷವಾಕ್ಯದೊಂದಿಗೆ ವಿಶ್ವ ರೇಬಿಸ್ ದಿನಾಚರಣೆಯನ್ನು ಆಚರಿಸುತ್ತಿದ್ದೇವೆ. ಇದೊಂದು 100% ಮಾರಕ ರೋಗವಾಗಿದ್ದು 100% ಇದನ್ನು ತಡೆಗಟ್ಟಬಹುದಾಗಿದೆ. ವರ್ಷಕ್ಕೆ 20 ಸಾವಿರ ಸಾವುಗಳು ಭಾರತದಲ್ಲಿ ರೇಬಿಸ್‌ನಿಂದ ಆಗುತ್ತಿವೆ. ಕಾರಣ ರೇಬಿಸ್ ಲಸಿಕೆಯ ಬಗ್ಗೆ ಭಯ ಬಿಟ್ಟು ಎಲ್ಲರೂ ಲಸಿಕೆಯನ್ನು ಹಾಕಿಸಿಕೊಳ್ಳಬಹುದು.

ನಾಯಿ, ಬೆಕ್ಕು ಇತರೇ ಪ್ರಾಣಿಗಳು ಕಚ್ಚಿದಾಗ ನಿರ್ಲಕ್ಷ ವಹಿಸದೇ ತಕ್ಷಣವೇ 15 ನಿಮಿಷಗಳವರೆಗೆ ಸಾಬೂನಿಂದ ಖಣಟಟಿಟುಟಿರ ಫಚಿಣಜಡಿ

ಮೂಲಕ ಚೆನ್ನಾಗಿ ತೊಳೆದು ನಂತರ ನಂಜು ನಿರೋಧಕ ದ್ರಾವಣ ಲೇಪಿಸಿ ಹತ್ತಿರದ ಸರಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಳ್ಳಬೇಕೆಂದು ಹೇಳಿದರು.

ಮುಂದುವರೆದು ಸಾಮಾನ್ಯವಾಗಿ ರೇಬಿಸ್ ಸೋಂಕು ಹೊಂದಿದ ಪ್ರಾಣಿಗಳಲ್ಲಿ ನಾಯಿಗಳಿಂದ 97% ರಷ್ಟು, ಬೆಕ್ಕುಗಳಿಂದ 2% ಹಾಗೂ ಇತರೇ ಪ್ರಾಣಿಗಳಿಂದ 1%ರಷ್ಟು ರೋಗ ಹರಡುವ ಸಾಧ್ಯತೆಯಿದೆ. ಇವುಗಳ ಕಡಿತದಿಂದ,

ಪರಚುವಿಕೆಯಿಂದ ತೆರೆದ ಚರ್ಮದ ಮೇಲೆ ನೆಕ್ಕುವಿಕೆಯಿಂದ, ಜೊಲ್ಲಿನ ಸಂಪರ್ಕದಿಂದ ರೋಗ ಹರಡುವ ಸಾಧ್ಯತೆ ಇದ್ದು ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಉಚಿತವಾಗಿ ಲಸಿಕೆಗಳು ಲಭ್ಯವಿರುವಂತೆ ಕ್ರಮ ವಹಿಸಲಾಗಿದೆ ಎಂದು ತಿಳಿಸಿದರು.

ಹಾಲುಣಿಸುವ ತಾಯಂದಿರು 1 ವರ್ಷದೊಳಗಿನ ಮಕ್ಕಳು ಮತ್ತು ವಯಸ್ಕರು ಸಹ ಪ್ರಾಣಿಗಳು ಕಡಿದಾಗ ರೇಬಿಸ್ ವಿರುದ್ಧ ಲಸಿಕೆಯನ್ನು ತಪ್ಪದೇ ತೆಗೆದುಕೊಳ್ಳುವ ಮೂಲಕ ಪ್ರತಿಯೊಬ್ಬರೂ ಮುಂಜಾಗ್ರತೆ ವಹಿಸಬೇಕು ಹಾಗೂ ಸಾಕು ಪ್ರಾಣಿಗಳಿಗೂ ಕೂಡ ತಪ್ಪದೇ ಪ್ರತಿವರ್ಷ ಲಸಿಕೆ ಹಾಕಿಸಿ ಎಂದು ತಿಳಿಸಲಾಯಿತು.

ಪ್ರಭಾರಿ ಪ್ರಾಂಶುಪಾಲರಾದ ಮಹೇಶ ಬದನಿಕಾಯಿ ಇವರು ಅಧ್ಯಕ್ಷತೆ ವಹಿಸಿ ಮಾತನಾಡಿ ನಮ್ಮ ಹೃದಯದ ಆರೋಗ್ಯವನ್ನು ಸಧೃಡವಾಗಿಟ್ಟುಕೊಳ್ಳಲು ಪ್ರತಿದಿನ ವ್ಯಾಯಾಮ, ಯೋಗಾಸನ, ಪೌಷ್ಟಿಕ ಆಹಾರ ಹಾಗೂ ಉತ್ತಮ ಆರೋಗ್ಯಕ್ಕಾಗಿ ಕನಿಷ್ಠ 7 ರಿಂದ 8 ಗಂಟೆಯವರೆಗೆ ಆರೋಗ್ಯಕರ ನಿದ್ರೆ ಅವಶ್ಯಕ ವಾಗಿರುತ್ತದೆಂದು ತಿಳಿಸಿದರು.

ಡಾ.ಲಕ್ಷಣ ಪೂಜಾರ ತಾಲೂಕ ಆರೋಗ್ಯಾಧಿಕಾರಿಗಳು, ಮುಂಡರಗಿ ರವರು ಮಾತನಾಡಿ ವಿಶ್ವ ಹೃದಯ ದಿನವನ್ನು ಪರಿಣಾಮಕಾರಿಯಾಗಿ ಜನರಲ್ಲಿ ಜಾಗೃತಿಯನ್ನು ಮೂಡಿಸುವುದು ನಮ್ಮೆಲ್ಲರ ಮುಖ್ಯ ಕರ್ತವ್ಯವಾಗಿದೆ. ಆಧುನಿಕ ಜೀವನ ಶೈಲಿ, ಧೂಮಪಾನ, ಮಧುಮೇಹ, ಅಧಿಕ ರಕ್ತದೊತ್ತಡ, ಬೊಜ್ಜು ಮತ್ತು ಆರೋಗ್ಯದ ಬಗ್ಗೆ ನಿರ್ಲಕ್ಷ ಇವೆಲ್ಲವುದರ ಕಾರಣಗಳಿಂದಾಗಿ ಹೃದಯಕ್ಕೆ ಸಂಬಂಧಿಸಿದ ಸಮಸ್ಯೆಗಳು ಹೆಚ್ಚಾಗಿ ಕಾಣಿಸಿಕೊಳ್ಳುತ್ತಿರುವುದು ಎಚ್ಚರಿಕೆಯ ಗಂಟೆಯಾಗಿದೆ. ಇತ್ತೀಚಿನ ದಿನಗಳಲ್ಲಿ ಹೃದ್ರೋಗದ ಪ್ರಕರಣಗಳು ಹೆಚ್ಚಾಗುತ್ತಿದ್ದು, ಯುವ ಜನರೆ ಹೆಚ್ಚಿನ ಸಂಖ್ಯೆಯಲ್ಲಿ ಹಠತ್ತಾಗ

ಅರ್ಜಿ ಆಹ್ವಾನ; ಅವಧಿ ವಿಸ್ತರಣೆ

ಶಿವಮೊಗ್ಗ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2025–26 ನೇ ಸಾಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿಯನ್ನು ವ್ಯಾಸಂಗ ಮಾಡುತ್ತಿರುವ ಪ್ರವರ್ಗ–1, 2ಎ, 3ಎ, 3ಬಿ, ಪ.ಜಾ./ಪ.ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಕಡೆಯ ದಿನಾಂಕವನ್ನು ಅ. 14ರವರೆಗೆ ವಿಸ್ತರಿಸಲಾಗಿದೆ.ಆಸಕ್ತರು ಅರ್ಜಿಯನ್ನು https://shp.karnataka.gov.in/bcwd ಮೂಲಕ ಅ.14 ರೊಳಗಾಗಿ ಸಲ್ಲಿಸುವುದು.ಅರ್ಜಿಯನ್ನು ಸಲ್ಲಿಸಲು ಪ್ರವರ್ಗ–1, ಎಸ್.ಸಿ ಮತ್ತು ಎಸ್.ಟಿ. ಸೇರಿದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯವು ರೂ.2.50 ಲಕ್ಷಕ್ಕಿಂತ ಮೀರಿರಬಾರದು. ಪ್ರವರ್ಗ–2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯವು ರೂ.1.00 ಲಕ್ಷ ಮೀರಿರಬಾರದು. ತಾಲೂಕುವಾರು ವಿದ್ಯಾರ್ಥಿನಿಲಯದ ವಿವರ ಹಾಗೂ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರಿ ಆದೇಶಕ್ಕಾಗಿ ಇಲಾಖೆಯ ವೆಬ್ ಸೈಟ್ ವಿಳಾಸ https://bcwd.karnataka.gov.in ನ್ನು ಸಂಪರ್ಕಿಸುವುದು. ಅರ್ಜಿ ಸಲ್ಲಿಸುವಾಗ ತಾಂತ್ರಿಕ ತೊಂದರೆಗಳಾದಲ್ಲಿ ಇ–ಮೇಲ್ bcwdhelpline@.karnataka.gmail.com ಮುಖಾಂತರ ಅಥವಾ ಜಿಲ್ಲಾ/ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಕಛೇರಿ ವೇಳೆಯಲ್ಲಿ ಸಂಪರ್ಕಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಮೊ.ಸಂ.8050770004/ 8050770005 ಗಳನ್ನು ಸಂಪರ್ಕಿಸುವುದು.

ಶಿವಮೊಗ್ಗ ಜಿಲ್ಲಾ ಮಟ್ಟದ ಯುವಜನೋತ್ಸವ

ಶಿವಮೊಗ್ಗ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಅ. 15 ರಂದು ಬೆಳಗ್ಗೆ 9.00 ರಿಂದ ಕುವೆಂಪು ರಂಗಮಂದಿರದಲ್ಲಿ 2025–26ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ.ಈ ಕಾರ್ಯಕ್ರಮದಲ್ಲಿ ಜಾನಪದ ನೃತ್ಯ, ಜಾನಪದ ಗೀತೆ, ಕಥೆ ಬರೆಯುವುದು, ಚಿತ್ರಕಲೆ, ಘೋಷಣೆ ಹಾಗೂ ಕವಿತೆ ಬರೆಯುವ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ.ಸ್ಪರ್ಧೆಯಲ್ಲಿ ಭಾಗವಹಿಸುವ ಯುವಕ/ ಯುವತಿಯರು 15 ರಿಂದ 29 ವರ್ಷ ವಯೋಮಿತಿಯೊಳಗಿದ್ದು, ನೋಂದಣಿ ಸಮಯದಲ್ಲಿ ಆಧಾರ್ ಕಾರ್ಡ್/ಎಸ್.ಎಸ್.ಎಲ್.ಸಿ. ಅಂಕಪಟ್ಟಿ/ ಜನನ ಪ್ರಮಾಣ ಪತ್ರ ಇವುಗಳಲ್ಲಿ ಯಾವುದಾದೊಂದು ದಾಖಲೆಯನ್ನು ಕಡ್ಡಾಯವಾಗಿ ಸಲ್ಲಿಸಬೇಕು. ಶಿವಮೊಗ್ಗ ಜಿಲ್ಲೆಯಲ್ಲಿ ವಾಸವಾಗಿರುವ ದೃಢೀಕರಣ ಪತ್ರವನ್ನು ತರಬೇಕು. ರಾಷ್ಟ್ರಮಟ್ಟದ ಯುವಜನೋತ್ಸವದಲ್ಲಿ ಸತತವಾಗಿ 3 ವರ್ಷಗಳು ಭಾಗವಹಿಸಿದ್ದು ಅಥವಾ ಒಂದು ಬಾರಿ ಪದಕ ಪಡೆದಿದ್ದರೆ ಅಂತಹ ಯುವಜನರು ಭಾಗವಹಿಸುವಂತಿಲ್ಲ.ಆಸಕ್ತರು ಅ. 14 ರೊಳಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಿವಮೊಗ್ಗ ಇವರ ಕಚೇರಿಯಲ್ಲಿ ಹೆಸರನ್ನು ನೊಂದಾಯಿಸಿಕೊಳ್ಳುವಂತೆ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ,

ನೆಹರು ಕ್ರೀಡಾಂಗಣ, ಶಿವಮೊಗ್ಗ ಕಚೇರಿಯನ್ನು ಸಂಪರ್ಕಿಸುವುದು

ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ–2025

ಗದಗ : ದಿನಾಂಕ 07–10–2025 ರಂದು ಶ್ರೀ ಮಹರ್ಷಿ ವಾಲ್ಮೀಕಿ ಜನ್ಮ ದಿನಾಚರಣೆಯನ್ನು ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲನಲ್ಲಿ ಬೆಳಗ್ಗೆ 10:30 ಗಂಟೆಗೆ ಜರುಗಲಿದೆ.

ಜಿಲ್ಲಾ ಮಟ್ಟದ ಅಧಿಕಾರಿಗಳು ಎಲ್ಲ ತಾಲೂಕ ಮಟ್ಟದ ಅಧಿಕಾರಿಗಳು, ಜನಪ್ರತಿನಿದಿಗಳು, ಶ್ರೀ ಮಹರ್ಷಿ ವಾಲ್ಮೀಕಿ ಸಮಾಜದ ಮುಖಂಡರು ಗುರು ಹಿರಿಯರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮುಖಂಡರು, ದಲಿತಪರ ಸಂಘಟನೆಗಳ ಮುಖಂಡರು, ವಿವಿಧ ಸಂಘಟನೆಗಳ ಮುಖಂಡರು, ಸರ್ವ ಸದಸ್ಯರು, ಗಣ್ಯವ್ಯಕ್ತಿಗಳು, ಸಂಘ ಸಂಸ್ಥೆಯ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯ ಕಾರ್ಯಕ್ರಮದಲ್ಲಿ ಭಾಗವಹಿಸಲು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಕೂರಿದ್ದಾರೆ.

36ನೇ ಸೌತ್‌ಜೋನ್ ಜೂ. ಅಥ್ಲೇಟಿಕ್ಸ್ ಚಾಂಪಿಯನ್‌ಶಿಪ್‌ನಲ್ಲಿ ಪದಕ ಪಡೆದ ಜಿಲ್ಲಾ ಕ್ರೀಡಾಪಟುಗಳು

ಶಿವಮೊಗ್ಗ: ಆಂದ್ರಪ್ರದೇಶದ ಗುಂಟೂರು ನಾಗಾರ್ಜುನ್ ಯೂನಿವರ್ಸಿಟಿಯಲ್ಲಿ ಸೆ. 23 ರಿಂದ 25ರವರೆಗೆ ಅಥ್ಲೆಟಿಕ್ಸ್ ಅಸೋಸಿಯೇಸನ್ಸ್ ವತಿಯಿಂದ ನಡೆದ 36ನೇ ಸೌತ್‌ಜೋನ್ ಜೂನಿಯರ್ ಅಥ್ಲೆಟಿಕ್ಸ್ ಚಾಂಪಿಯನ್ ಶಿಪ್–2025ರ ಕ್ರೀಡಾಕೂಟದಲ್ಲಿ ಶಿವಮೊಗ್ಗ ಜಿಲ್ಲೆಯ ಕ್ರೀಡಾಶಾಲೆ/ ವಸತಿ ನಿಲಯಗಳ ಕ್ರೀಡಾಪಟಗಳು ಭಾಗವಹಿಸಿ ಪದಕಗಳನ್ನು ಗಳಿಸಿದ್ದಾರೆ.

ಸಂಜಯ್ ಸುನೀಲ್ ಹಂಚಿನಮನೆ 60ಮೀ ಮಿಡ್ಲ್ ಪ್ರಥಮ, ರಿಲೇಯಲ್ಲಿ ದ್ವಿತೀಯ, ಶರತ್ ಕೆ.ಜೆ. 600 ಮೀ ಮತ್ತು ಮಿಡ್ಲ್ ರಿಲೇಯಲ್ಲಿ ದ್ವಿತೀಯ, ಸಚಿನ್ ಎಲ್.ಜೆ.. ಮಿಡ್ಲ್ ರಿಲೇಯಲ್ಲಿ ಮತ್ತು ಮತ್ತು ಸಿರಿ ಕೆ.ಜೆ. ಮಿಡ್ಲ್ ರಿಲೇ ತೃತೀಯ ಸ್ಥಾನಗಳಲ್ಲಿ ವಿಜೇತರಾಗಿದ್ದು, ಕ್ರೀಡಾಪಟುಗಳಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾ ವಸತಿ ನಿಲಯದಲ್ಲಿ ಬಾಳಪ್ಪ ಮಾನೆ ಅಥ್ಲೆಟಿಕ್ ದೈನಂದಿನ ತರಬೇತಿ ನೀಡುತ್ತಿದ್ದಾರೆ. ವಿಜೇತರಿಗೆ ಜಿಲ್ಲಾಧಿಕಾರಿಗಳು, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು, ಜಿಲ್ಲಾ ಅಥ್ಲೆಟಿಕ್ ಅಸೋಸಿಯೋಶನ್ ಕಾರ್ಯದರ್ಶಿಗಳು ಹಾಗು ಸಿಬ್ಬಂದಿ ವರ್ಗದವರು ಶುಭ ಹಾರೈಸಿದ್ದಾರೆ. (ಛಾಯಾಚಿತ್ರ ಲಗತ್ತಿಸಿದೆ)

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರ ಜಿಲ್ಲಾ ಪ್ರವಾಸ

ದಾವಣಗೆರೆ : ಮಾನ್ಯ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ.ಜಿ. ಇವರು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ.

ಅಕ್ಟೋಬರ್ 5 ರಂದು ದಾವಣಗೆರೆ ಆಗಮಿಸಿ ವಾಸ್ತವ್ಯ ಮಾಡುವರು. ಅಕ್ಟೋಬರ್ 6 ರಂದು ಬೆಳಿಗ್ಗೆ 11.30ಕ್ಕೆ ಜಗಳೂರಿಗೆ ಭೇಟಿ ನೀಡಿ ಬಸ್ ಸ್ಟ್ಯಾಂನಲ್ಲಿ ವಾಸ ಮಾಡುತ್ತಿರುವ ನಿವೇಶನ ರಹಿತ ಪರಿಶಿಷ್ಟ ಜಾತಿಯ ಅಲೆಮಾರಿ ಸಮುದಾಯಗಳ ನಿವೇಶನಕ್ಕೆ ಸಂಬಂಧಪಟ್ಟಂತೆ ಪರಿಶೀಲನೆ ಹಾಗೂ ಮುಖ್ಯಾಧಿಕಾರಿ, ತಹಶೀಲ್ದಾರ್, ಉಪನಿರ್ದೇಶಕರು, ಸಹಾಯಕ ನಿರ್ದೇಶಕರು, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ ಮತ್ತು ಇತರೆ ಅಧಿಕಾರಿಗಳೊಂದಿಗೆ ಸಭೆ ನಡೆಸುವರು.

ಆರೋಗ್ಯಕರ ಹೃದಯದ ಅರಿವು ದೀರ್ಘ ಬದುಕಿಗೆ ಸಂಜೀವಿನಿ

ಉತ್ತಮ ಜೀವನ ಶೈಲಿ, ಪೌಷ್ಟಿಕ ಆಹಾರ ಸೇವನೆ, ದೈಹಿಕ ಚಟುವಟಿಕೆಗಳು ಸೇರಿದಂತೆ ಆರೋಗ್ಯಕರ ಅಭ್ಯಾಸಗಳನ್ನು ಅಳವಡಿಸಿಕೊಳ್ಳುವ ಮೂಲಕ ಹೃದಯ ಆರೋಗ್ಯವನ್ನು ಉತ್ತಮವಾಗಿ ಕಾಪಾಡಿಕೊಂಡು ದೀರ್ಘಕಾಲ ಬದುಕಬಹುದೆಂದು ಪ್ರೊ. ಸುಧಾ ಕೌಜಗೇರಿ ಹೇಳಿದರು. ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಐಕ್ಯುಎಸಿ, ಯುವ ರೆಡ್‌ಕ್ರಾಸ್ ಘಟಕ, ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಘಟಕ, ಎನ್.ಎಸ್.ಎಸ್. ಘಟಕ ಹಾಗೂ ಆರ್.ಎಂ.ಎಸ್. ನರ್ಸಿಂಗ್ ಕಾಲೇಜಿನ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ 'ವಿಶ್ವ ಹೃದಯ ದಿನ' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ಹೃದಯವು ನಮ್ಮ ದೇಹದ ಅತಿ ಮುಖ್ಯ ಅಂಗವಾಗಿದ್ದು, ಇದರ ಆರೋಗ್ಯವನ್ನು ಕಾಪಾಡಿಕೊಳ್ಳುವುದು ತುಂಬಾ ಮುಖ್ಯವಾಗಿದೆ ಎಂದು ಹೇಳಿದರು.

ನರ್ಸಿಂಗ್ ಕಾಲೇಜಿನ ಉಪನ್ಯಾಸಕಿ ನೇತ್ರಾ ಮಾಳಿ ಅವರು ಪ್ರತಿವರ್ಷ ಸಪ್ಟೆಂಬರ್ 29ರಂದು 'ವಿಶ್ವ ಹೃದಯ ದಿನ' ಕಾರ್ಯಕ್ರಮ ಆಯೋಜಿಸುತ್ತಿದ್ದು, ಹೃದಯ ಆರೋಗ್ಯದ ಬಗ್ಗೆ ಜನಸಾಮಾನ್ಯರು ಮತ್ತು ವಿದ್ಯಾರ್ಥಿಗಳಲ್ಲಿ ಹೆಚ್ಚಿನ ಅರಿವು ಮೂಡಿಸುವುದು ಅತಿ ಅವಶ್ಯವಾಗಿದೆ. ಹೃದಯ ಸಂಬಂಧಿತ ಕಾಯಿಲೆಗಳು ಇತ್ತೀಚಿನ ದಿನಗಳಲ್ಲಿ

ಯುವಕರಲ್ಲಿ ಹೆಚ್ಚಾಗಿ ಕಾಣುತ್ತಿದ್ದು, ಇದಕ್ಕೆ ಜೀವನ ಶೈಲಿ, ಆಹಾರ ಪದ್ಧತಿ, ಕೆಲಸದ ಒತ್ತಡ ಮೊದಲಾದವುಗಳು ಮುಖ್ಯ ಕಾರಣಗಳಾಗಿದ್ದು, ವಿದ್ಯಾರ್ಥಿಗಳು ವ್ಯಾಯಾಮ, ಯೋಗಾಸನ, ಮೆಡಿಟೇಶನ್ ಮುಂತಾದ ಭೌತಿಕ ಮತ್ತು ಬೌದ್ಧಿಕ ಚಟುವಟಿಕೆಗಳೆಡೆಗೆ ಗಮನಹರಿಸಿ ಉತ್ತಮ ಆಹಾರ ಸೇವನೆ, ಧ್ಯಾನ, ಕನಿಷ್ಠ 6–8 ತಾಸುಗಳ ನಿದ್ದೆ ಮಾಡಬೇಕು. ರೋಗಕ್ಕೆ ಹೆದರದೆ ಸಕಾರಾತ್ಮಕವಾಗಿ ಸ್ಪಂದಿಸಬೇಕು ಎಂದು ಹೇಳಿದರು.

ಯುವ ರೆಡ್‌ಕ್ರಾಸ್ ಘಟಕದ ಸಂಯೋಜಕಿ ಮಹಾನಂದ ಹಿರೇಮಠ ಅತಿಥಿಗಳನ್ನು ಪರಿಚಯಿಸಿ ಸ್ವಾಗತಿಸಿದರು. ಎನ್.ಎಸ್.ಎಸ್. ಘಟಕದ ಸಂಯೋಜಕ ಪ್ರೊ. ಅಪ್ಪಣ್ಣ ಹಂಜೆ ಪ್ರಾಸ್ತಾವಿಕವಾಗಿ ಮಾತನಾಡಿದರು. ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳು ಹೃದಯದ ಆಕಾರ, ಸ್ವರೂಪ, ಕಾರ್ಯನಿರ್ವಹಣೆ, ಹೃದಯ ಸಂಬಂಧಿತ ಕಾಯಿಲೆಗಳು, ಮುಂಜಾಗ್ರತಾ ಕ್ರಮಗಳು, ಆಹಾರ ಪದ್ಧತಿ, ಜೀವನ ಶೈಲಿ, ಯೋಗಾಸನಗಳು, ಹೃದಯಾಘಾತ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಪ್ರಥಮ ಚಿಕಿತ್ಸೆ ಕುರಿತು ಪ್ರಾತ್ಯಕ್ಷಿಕೆ ಮೂಲಕ ವಿವರಣೆ ನೀಡಿದರು. ಭಾಗವಹಿಸಿದ್ದ ಪ್ರಾಧ್ಯಾಪಕರು, ವಿದ್ಯಾರ್ಥಿಗಳು ಸಂವಾದ ನಡೆಸಿ ಹೆಚ್ಚಿನ ಮಾಹಿತಿ ಪಡೆದರು. ಬುಳ್ಳಪ್ಪ ಕಾರ್ಯಕ್ರಮ ನಡೆಸಿಕೊಟ್ಟರು.

ಶ್ರೀ ಗಾಯಿತ್ರಿ ಪರಿವಾರದ ಆಶ್ರಯದಲ್ಲಿ ಶೀಗೀ ಹುಣ್ಣಿಮೆ ಅಂಗವಾಗಿ ಅಕೋಬರ್ 7 ರಂದು ಸಾಮೂಹಿಕ ಶ್ರೀ ಗಾಯತ್ರಿ ಪೂಜೆ ಹಾಗೂ ಉಪಾಸನೆ ಕಾರ್ಯಕ್ರಮ

ದಾವಣಗೆರೆ: ನಗರದ ಶ್ರೀ ಗಾಯತ್ರಿ ದೇವಿಯ ಉಪಾಸಕರ ಕ್ರಿಯಾತ್ಮಕ ಆಧ್ಯಾತ್ಮ ಸಂಸ್ಥೆ ಶ್ರೀ ಗಾಯತ್ರಿ ಪರಿವಾರದಿಂದ ಪ್ರತೀ ತಿಂಗಳ ಹುಣ್ಣಿಮೆಯೆಂದು ನಡೆಸುವ ಸಾಮೂಹಿಕ ಶ್ರೀ ಗಾಯತ್ರಿ ಪೂಜೆ, ಉಪಾಸನೆ, ಶೀಗೀ ಹುಣ್ಣಿಮೆ ಅಂಗವಾಗಿ ದಿನಾಂಕ 07–10–2025 ರಂದು ಮಂಗಳವಾರ ಬೆಳಿಗ್ಗೆ 7–00ಕ್ಕೆ ನಡೆಯಲಿದೆ ಎಂದು ಶ್ರೀ ಗಾಯಿತ್ರಿ ಪರಿವಾರದ ಅಧ್ಯಕ್ಷರಾದ ಡಾ॥ ರಮೇಶ್ ಪಟೇಲ್ ಪಟೇಲ್ ತಿಳಿಸಿದ್ದಾರೆ

ನಗರದ ಜಯದೇವ ವೃತ್ತದಲ್ಲಿರುವ ಶ್ರೀ ಶಂಕರಮಠದಲ್ಲಿ ನಡೆಯಲಿರುವ ಈ ಅಪ್ಪಟ ಆಧ್ಯಾತ್ಮ ಸಮಾರಂಭದ ಈ ಬಾರಿಯ ಪೂಜಾ ಸೇವಾಕರ್ತರಾದ ಕೆ.ಹೆಚ್.ಮಂಜುನಾಥ್ ಮತ್ತು ಕುಟುಂಬದವರು ಕಳೆದ ಇಪ್ಪತ್ತೈದು ವರ್ಷಗಳಿಂದಲೂ ನಿರಂತರವಾಗಿ ಪ್ರತೀ ಪೂರ್ಣಿಮೆ ಯಂದು ನಡೆಯುವ ಈ ಧಾರ್ಮಿಕ ಪ್ರಕ್ರಿಯೆಯಲ್ಲಿ ಆಸಕ್ತ ಸಾರ್ವಜನಿಕರು ಯಾವುದೇ ಜಾತಿ, ಮತ, ವರ್ಣ, ಲಿಂಗ ಬೇಧವಿಲ್ಲದೇ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಬೇಕಾಗಿ ಪರಿವಾರದ ಪ್ರಧಾನ ಕಾರ್ಯದರ್ಶಿ ಸಾಲಿಗ್ರಾಮ ಗಣೇಶ್ ಶೆಣೈ ವಿನಂತಿಸಿದ್ದಾರೆ.

ರಘು ಗುಂಡ್ಲುಗೆ ಅತ್ಯುತ್ತಮ ಸಿನಿಮಾ ಪ್ರಚಾರಕ ಪ್ರಶಸ್ತಿ

ಶಿವಮೊಗ್ಗ: ಮಹಾನಗರಪಾಲಿಕೆ ಮತ್ತು ಕನ್ನಡ ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಸಾಂಸ್ಕೃತಿಕ ದಸರಾ ಕಾರ್ಯಕ್ರಮದಲ್ಲಿ ಶಿವಮೊಗ್ಗ ಸಿನಿಮಾಸ್ ಅಡ್ಡ ಸಂಸ್ಥೆಯ ಪಿ ಆರ್ ಓ ರಘು ಗುಂಡ್ಲು ಅವರಿಗೆ ಸಿನಿಮಾ ಪ್ರಚಾರದ ಕೆಲಸವನ್ನು ಗುರುತಿಸಿ "ಅತ್ಯುತ್ತಮ ಸಿನಿಮಾ ಪ್ರಚಾರಕ ಪ್ರಶಸ್ತಿ " ನೀಡಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಹಿರಿಯನಟಿ ಗೀತಾ, ಶಾಸಕರಾದ ಚನ್ನಬಸಪ್ಪ, ಡಿ ಎಸ್ ಅರುಣ್, ಆಯುಕ್ತ ಮಾಯಣ್ಣ ಗೌಡ, ವಿಶ್ವಾಸ್ ಸೇರಿದಂತೆ ಇತರರಿದ್ದರು.

ಉದ್ಯಮಶೀಲತಾ ಅಭಿವೃದ್ಧಿ ತರಬೇತಿಗಾಗಿ ಅರ್ಜಿ ಆಹ್ವಾನ

ಬಳ್ಳಾರಿ: ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಪ್ರಾಯೋಜಕತ್ವದಲ್ಲಿ ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ(ಸಿಡಾಕ್) ವತಿಯಿಂದ ಸ್ವಂತ ಉದ್ಯೋಗ ಸ್ಥಾಪಿಸಲು ಇಚ್ಚಿಸುವವರಿಗಾಗಿ 10 ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಬಳ್ಳಾರಿಯಲ್ಲಿ ಹಮ್ಮಿಕೊಳ್ಳಲಾಗುತ್ತಿದ್ದು, ಆಸಕ್ತ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಮಹಿಳೆಯರಿಂದ ಅರ್ಜಿ ಆಹ್ವಾನಿಸಲಾಗಿದೆ.ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗ ಯೋಜನೆಗಳು, ಬ್ಯಾಂಕಿನ ವ್ಯವಹಾರ, ಮಾರುಕಟ್ಟೆ ಸಮೀಕ್ಷೆ, ಯೋಜನಾ ವರದಿ ತಯಾರಿಕೆ, ಹಾಗೂ ಉದ್ಯಮ ನಿರ್ವಹಣೆ, ಇತ್ಯಾದಿ ವಿಷಯಗಳ ಕುರಿತು ತರಬೇತಿ ನೀಡಲಾಗುತ್ತದೆ.ಅಭ್ಯರ್ಥಿಗಳು 18 ವರ್ಷ ದಿಂದ 45 ವರ್ಷ ವಯಸ್ಸಿನವರಾಗಿರಬೇಕು ಹಾಗೂ ಓದಲು/ಬರೆಯಲು ಬರುತ್ತಿರಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಮಹಿಳೆಯರಿಗೆ ಮಾತ್ರ. ಅರ್ಜಿಯನ್ನು ನಗರದ ಹೊಸಪೇಟೆ ರಸ್ತೆಯ ಜಿಲ್ಲಾ ಕೈಗಾರಿಕಾ ಕೇಂದ್ರದ ಕಟ್ಟಡದ ಸಿಡಾಕ್ ನ ಜಂಟಿ ನಿರ್ದೇಶಕರ ಕಚೇರಿಯಲ್ಲಿ ಪಡೆದುಕೊಳ್ಳಬಹುದು ಸಿಡಾಕ್ ನ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಕ್ರಮವಾಗಿ ತಲೆ ಎತ್ತಿದ ಹಂದಿ ಮಾಂಸದ ಅಂಗಡಿ – ಕಣ್ಮುಚ್ಚಿ ಕುಳಿತ ಗ್ರಾ.ಪಂ ಅಧಿಕಾರಿಗಳು

ಬೇಲೂರು: ಹಾಸನ ಮಾರ್ಗವಾಗಿ ಸಿಗುವ ಹಗರೆ ಗ್ರಾಮದ ರಾಷ್ಟ್ರೀಯ ಹೆದ್ದಾರಿ 373 ರಸ್ತೆಯಲ್ಲಿ ರಸ್ತೆ ಅತಿಕ್ರಮಿಸಿ ಬೀದಿಬದಿಯಲ್ಲಿ ಹಂದಿ ಮಾಂಸದ ಅಂಗಡಿ ಶೆಡ್‌ಗಳು ತಲೆ ಎತ್ತಿವೆ. ದಿನನಿತ್ಯ ಸಾವಿರಾರು ವಾಹನಗಳು ಸಂಚರಿಸುವ ಈ ರಾಷ್ಟ್ರೀಯ ಹೆದ್ದಾರಿ ರಸ್ತೆಯಲ್ಲಿ ಸಂಚಾರಕ್ಕೆ ಅಡ್ಡಿಯಾಗುತ್ತಿರುವ ಶೆಡ್‌ಗಳನ್ನು ತೆರವುಗೊಳಿಸಿ ಸುಗಮ ಸಂಚಾರಕ್ಕೆ ಅನುವು ಮಾಡಕೊಡಲೇಬೇಕು ಎಂಬುವುದು ಸಾರ್ವಜನಿಕರ ಆಗ್ರಹವಾಗಿದೆ.

ಬೇಲೂರು ತಾಲೂಕಿನ ಹಗರೆ ಗ್ರಾ.ಪಂ ವ್ಯಾಪಿಯಲ್ಲಿ ಹಾಸನ ಜಿಲ್ಲೆಯಲ್ಲಿರುವ ಪ್ರಸಿದ್ಧ ದೇವಾಲಯಗಳಲ್ಲಿ ಒಂದಾದ ಶ್ರೀ ದೇವಿರಮ್ಮ ದೇವಾಸ್ಥಾನ ಹಗರೆ ಗ್ರಾಮದಲ್ಲಿ ಈ ದೇವಾಲಯಕ್ಕೆ ದಿನನಿತ್ಯ ನೂರಾರು ಭಕ್ತಾದಿಗಳು ಆಗಮಿಸುತ್ತಾರೆ. ದೇವಾಲಯಕ್ಕೆ ಬರುವ ಭಕ್ತಾದಿಗಳು ತಮ್ಮ ಇಷ್ಟಾರ್ಥ ಈಡೇರಿಕೆಗಾಗಿ ಹಂದಿ ಹಾಗೂ ಕೋಳಿಯನ್ನು ಹರಕೆಯಾಗಿ ನೀಡುತ್ತಾರೆ. ಈ ಹಿನ್ನೆಲೆಯಲ್ಲಿ ಇಲ್ಲಿಯ ಕೆಲವರು ಹಾಸನ ಬೇಲೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ರಸ್ತೆ ಬದಿಗೆಹೊಂದಿ

ತರೀಕೆರೆ–ಮೊಸರಳ್ಳಿ ರೈಲು ಮಾರ್ಗ ಪರೀಶೀಲನೆ: ವಾಹನಗಳ ಒಡಾಟಕ್ಕೆ ಬದಲಿ ಮಾರ್ಗ

ಶಿವಮೊಗ್ಗ: ತರೀಕೆರೆ ಮೊಸರಳ್ಳಿ ನಡುವೆ ಬರುವ ಎಲ್‌ಸಿ.ನಂ: 24 ಮತ್ತು25 ಗಳನ್ನು ಮುಚ್ಚಲು ಅದಕ್ಕಾಗಿ ಎಲ್‌ಸಿ ಓಪನ್ನಿಗೆ ಮತ್ತು ಪರೀಕ್ಷೆಗಾಗಿ ಅ.06 ರಿಂದ 08 ರವರೆಗೆ ತಾತ್ಕಾಲಿಕವಾಗಿ ವಾಹನಗಳು ಮತ್ತು ಸಾರ್ವಜನಿಕರು ಸಮೀಪದ ಬದಲಿ ಮಾರ್ಗಗಳಲ್ಲಿ ಸಂಚರಿಸುವಂತೆ ಜಿಲ್ಲಾಧಿಕಾರಿಗಳು ಸೂಚಿಸಿ ಆದೇಶ ನೀಡಿರುತ್ತಾರೆ.

ಎಲ್‌ಸಿ 24– ಕಾಳಿಂಗಹಳ್ಳಿ ರಸ್ತೆ ರೈಲು ನಿಲ್ದಾಣ ಅ. 06 ರಂದು ಬೆ. 9.00 ರಿಂದ 07 ರಂದು ಬೆ 10.00ರವರೆಗೆ ಮಾರ್ಗ–1 ಬಾರಂದೂರು ಮೂಲಕ ಎಲ್.ಸಿ. 25 ಹಳ್ಳಿಕೆರೆ ಮುಖಾಂತರ ಮೊಸರಳ್ಳಿಗೆ ಹೋಗುವುದು ಹಾಗು 2) ಅಪ್ಪಾಜಿ ಬಡಾವಣೆಯಿಂದ ಕಾಳಿಂಗನಹಳ್ಳಿ ರಸ್ತೆ, ಭದ್ರಾವತಿಯಿಂದ ಮೊಸರಳ್ಳಿಗೆ ಹೋಗುವ ವಾಹನಗಳು ಶಿವನಿ ಕ್ರಾಸ್ ಮುಖಾಂತರ ಅಂತರಗಂಗೆಯಿಂದ ಮೊಸರಳ್ಳಿಗೆ ಹೋಗುವುದು.

ಎಲ್.ಸಿ.25– ಕೆಂಚೇನಹಳ್ಳಿ ರಸ್ತೆ ರೈ.ನಿ.–ಅ.07 ಮತ್ತು 08 ರಂದು ಮಾರ್ಗ–1 ಬರಂದೂರು ಮೂಲಕ ಎಲ್‌ಸಿ –24 2) ಅಪ್ಪಾಜಿ ಬಡಾವಣೆಯಿಂದ ಕಾಳಿಂಗನಹಳ್ಳಿ ರಸ್ತೆ ಭದ್ರಾವತಿಯಿಂದ ಮೊಸರಳ್ಳಿಗೆ ಹೋಗುವ ವಾಹನಗಳು ಶಿವನಿ ಕ್ರಾಸ್ ಮುಖಾಂತರ ಅಂತರಗಂಗೆ ಯಿಂದ ಮೊಸರಳ್ಳಿಗೆ ಹೋಗುವುದು.

ಈ ಬದಲಿ ಮಾರ್ಗಗಳಲ್ಲಿ ಸಂಚರಿಸಿ ಇಲಾಖೆಯೊಂದಿಗೆ ಸಹಕರಿಸುವಂತೆ ಕೋರಿದೆ.

ಅ.10ಕ್ಕೆ ಪ್ರೊ.ಬಿ.ವಿ.ವೀರಭದ್ರಪ್ಪ ಅವರ ವೈಚಾರಿಕ ಸಾಹಿತ್ಯ ಕುರಿತ ಸಂವಾದ

ದಾವಣಗೆರೆ: ಬೆಂಗಳೂರಿನ ಡಾ.ಬೆಸಗರಹಳ್ಳಿ ರಾಮಣ್ಣ ಪ್ರತಿಷ್ಠಾನದಿಂದ ಪ್ರೊ.ಬಿ.ವಿ.ವೀರಭದ್ರಪ್ಪ ಅವರ ವೈಚಾರಿಕ ಸಾಹಿತ್ಯ ಕುರಿತು ಸಂವಾದ ಕಾರ್ಯಕ್ರಮ ಅಕ್ಟೋಬರ್ 6ರ ಬೆಳಿಗ್ಗೆ 10ಕ್ಕೆ ದಾವಣಗೆರೆಯ ಬಾಪೂಜಿ ಎಂಬಿಎ ಕಾಲೇಜು ಸಭಾಂಗಣದಲ್ಲಿ ನಡೆಯಲಿದೆ ಎಂದು ಪ್ರತಿಷ್ಠಾನದ ಅಧ್ಯಕ್ಷೆ ಎಚ್.ಆರ್.ಸುಜಾತಾ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿಂತಕ ಡಾ.ಜಿ.ರಾಮಕೃಷ್ಣ ಕಾರ್ಯಕ್ರಮ ಉದ್ಘಾಟನೆ ಮಾಡಲಿದ್ದಾರೆ. ಅತಿಥಿಗಳಾಗಿ ಕವಿ ಪ್ರೊ.ಎಸ್.ಜಿ.ಸಿದ್ದರಾಮಯ್ಯ ಆಗಮಿಸಲಿದ್ದಾರೆ. ಅಧ್ಯಕ್ಷತೆಯನ್ನು ಬೆಂಗಳೂರಿನ ಡಾ.ಬೆಸಗರಹಳ್ಳಿ ರಾಮಣ್ಣ ಪ್ರತಿಷ್ಠಾನದ ಅಧ್ಯಕ್ಷೆ ಎಚ್.ಆರ್. ಸುಜಾತಾ ವಹಿಸಲಿದ್ದಾರೆ. ಅನಂತಮ್ಮ ವೀರಭದ್ರಪ್ಪ ಉಪಸ್ಥಿತಿ ಇರಲಿದೆ. ನಂತರ ನಡೆಯುವ ಗೋಷ್ಠಿಯಲ್ಲಿ ಬೆಳಗ್ಗೆ 11:15 ರಿಂದ ವಿಷಯ ಧರ್ಮ ಮತ್ತು ವೈಚಾರಿಕತೆ ಕುರಿತು ವಿಷಯ ಮಂಡನೆ ಆಗಲಿದೆ. ಡಾ.ಎಂ.ಎಸ್. ಆಶಾದೇವಿ, ಸತೀಶ್ ಕುಲಕರ್ಣಿ ಭಾಗವಹಿಸಲಿದ್ದಾರೆ ಎಂದರು.

ಗೋಷ್ಠಿ–2, ಮಧ್ಯಾಹ್ನ 2 ರಿಂದ ನಡೆಯಲಿದ್ದು, ವಿಷಯ ಮಹಿಳಾ ಮತ್ತು ದಲಿತ ನೋಟ ಕುರಿತು ಇರುತ್ತದೆ. ಈ ಗೋಷ್ಠಿಯಲ್ಲಿ ಡಾ.ಅನಸೂಯಾ ಕಾಂಬ್ಳೆ, ಹುಕ್ಕೇರಿ ಡಾ. ರವಿಕುಮಾರ್ ನೀಹ ಇರಲಿದ್ದಾರೆ. ಸಂಜೆ 4ಕ್ಕೆ ಸಮಾರೋಪ ಕಾರ್ಯಕ್ರಮ ನಡೆಯಲಿದ್ದು, ಕೇಂದ್ರ ಸಾಹಿತ್ಯ ಅಕಾಡೆಮಿಯ ಹಿಂದಿನ ಕಾರ್ಯದರ್ಶಿ ಅಗ್ರಹಾರ ಕೃಷ್ಣಮೂರ್ತಿ ಅತಿಥಿಯಾಗಿ ಆಗಮಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಬಿ.ಎನ್.ಮಲ್ಲೇಶ್, ಬಾ.ಮಾ.ಬಸವರಾಜಯ್ಯ, ಸುಧಾ, ಚಂದ್ರಮೌಳಿ ಆರ್. ಇತರರು ಇದ್ದರು.

ಅ.8ಕ್ಕೆ ಒಳಮೀಸಲಾತಿ ಹೋರಾಟಗಾರರಿಗೆ ಹಾಗೂ ನೂತನ ನಿಗಮ ಮಂಡಳಿಗಳ ಅಧ್ಯಕ್ಷರುಗಳಿಗೆ ಸನ್ಮಾನ ಕಾರ್ಯಕ್ರಮ

ದಾವಣಗೆರೆ: ದಾವಣಗೆರೆ ಜಿಲ್ಲಾ ಮಾದಿಗ ಮಹಾಸಭಾದಿಂದ ಒಳ ಮೀಸಲಾತಿಗಾಗಿ 35 ವರ್ಷ ಹೋರಾಟ ಮಾಡಿದವರಿಗೆ ಹಾಗೂ ನೂತನ ನಿಗಮ ಮಂಡಳಿಗಳಿಗೆ ಅಧ್ಯಕ್ಷರುಗಳಾಗಿ ನೇಮಕಗೊಂಡವರಿಗೆ ಅ.8 ರಂದು ಮಧ್ಯಾಹ್ನ 3 ಗಂಟೆಗೆ ಹರಪನಹಳ್ಳಿ ತಾಲ್ಲೂಕಿನ ಉಚ್ಚಂಗಿದುರ್ಗದ ಹಾಲ್ಮಮ್ಮನ ತೋಪಿನಲ್ಲಿ ಸನ್ಮಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮಹಾಸಭಾ ಮುಖಂಡ ಬಿ.ಹೆಚ್.ವೀರಭದ್ರಪ್ಪ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ರಾಜ್ಯದಲ್ಲಿ ಒಳಮೀಸಲಾತಿ ಹೋರಾಟ ಆರಂಭವಾಗಿ ಸುಮಾರು 35–40 ವರ್ಷಗಳಾಗಿವೆ. ಎಸ್.ಎಂ.ಕೃಷ್ಣ ನೇತೃತ್ವದ ಸರ್ಕಾರ ನ್ಯಾ.ಸದಾಶಿವ ಆಯೋಗ ರಚಿಸಿತು. ನಂತರ ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ ನಡೆಸಲು ಹೆಚ್. ಕಾಂತರಾಜು ನೇತೃತ್ವದ ಹಿಂದುಳಿದ ವರ್ಗಗಳ ಆಯೋಗವನ್ನು ರಚಿಸಿತು. ಜೆ.ಮಾಧುಸ್ವಾಮಿ ನೇತೃತ್ವದಲ್ಲಿ ಸಂಪುಟ ಉಪಸಮಿತಿ ಚಿಸಿ ಒಳಮೀಸಲಾತಿ ವರ್ಗಿಕರಣ ಮಾಡಿಸಿತಾದರೂ ಕೇಂದ್ರ ಸರ್ಕಾರದ ಅನುಮೋದನೆ ಪಡೆಯುವಲ್ಲಿ ವಿಫಲವಾಯಿತು ಎಂದರು.

2024 ಭಾರತದ ಸರ್ವೋಚ್ಚ ನ್ಯಾಯಾಲಯದ ಏಳು ಜನ ನ್ಯಾಯಾಧೀಶರು ಒಳಮೀಸಲಾತಿ ವರ್ಗಿಕರಣ ಮಾಡುವ ಅಧಿಕಾರ ರಾಜ್ಯ ಸರ್ಕಾರಗಳಿಗಿದೆ ಎಂದು ಬಹುಮತದ ತೀರ್ಪು ನೀಡಿದ ಮೇರೆಗೆ ರಾಜ್ಯ ಸರ್ಕಾರಗಳು ಒಳ ಮೀಸಲಾತಿ ವರ್ಗಿಕರಣಕ್ಕೆ ಮುಂದಾದವು. ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಶೇಕಡಾ 17ರ ಮೀಸಲಾತಿಯನ್ನು ಕ್ರಮವಾಗಿ 6, 6, 5 ಶೇಕಡಾವಾರು ವಿಭಜಿಸಿ ಅನುಮೋದಿಸಲಾಗಿದೆ ಎಂದರು.

ಈ ಹಿನ್ನೆಲೆಯಲ್ಲಿ ಸುಮಾರು 35–40 ವರ್ಷಗಳಿಂದ ಒಳಮೀಸಲಾತಿ ವರ್ಗಿಕರಣಕ್ಕಾಗಿ ಹೋರಾಟ ಮಾಡಿಕೊಂಡು ಬಂದಿರುವ ದಲಿತ ಸಂಘಟನೆಗಳು ಹಾಗೂ ಮಾದಿಗ ಸಂಘಟನೆಗಳ ಹೋರಾಟಗಾರರಿಗೆ ಹಾಗೂ ನೂತನ ನಿಗಮ ಮಂಡಳಿಗಳಿಗೆ ಅಧ್ಯಕ್ಷರುಗಳಾಗಿ ನೇಮಕ ಗೊಂಡವರಿಗೆ ಸನ್ಮಾನ ಸಮಾರಂಭವನ್ನು ಗಣ್ಯರ ಸಮ್ಮುಖದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಹಾಸಭಾದ ಎಸ್.ಮಲ್ಲಿಕಾರ್ಜುನ್, ಹೆಗ್ಗೆರೆ ರಂಗಪ್ಪ, ಎಲ್.ಡಿ.ಗೋಣಿಪ್ಪ, ಹೆಚ್.ಮಲ್ಲೇಶ್, ಹೆಚ್.ಸಿ.ಮಲ್ಲಪ್ಪ, ಸಿ.ಬಸವರಾಜ್, ನಾಗರಾಜ್, ಶಿವಕುಮಾರ್ ಇತರರು ಇದ್ದರು.

ಬೃಹತ್‘ಪರಿಸರ ಜಾಗೃತಿ’ ಕಾರ್ಯಕ್ರಮ

ಬಳ್ಳಾರಿ: ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸ್ಥಾಪನೆಗೊಂಡು 50 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಈ ಸುವರ್ಣ ಮಹೋತ್ಸವದ ಅಂಗವಾಗಿ ಅ.09 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸರ್ಕಾರಿ (ಮಾಪು) ಪದವಿಪೂರ್ವ ಕಾಲೇಜು ಮೈದಾನದಲ್ಲಿ ಬೃಹತ್ ‘ಪರಿಸರ ಜಾಗೃತಿ’ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಜಿಲ್ಲಾ ಪರಿಸರ ಅಧಿಕಾರಿಯವರು ತಿಳಿಸಿದ್ದಾರೆ.

ಜಿಲ್ಲಾಡಳಿತದಲ್ಲಿ ಕೆಳಹಂತದ ಯೋಜನೆಗಳೊಂದಿಗೆ ವಾರ್ಷಿಕ ಜಿಲ್ಲಾ ಅಭಿವೃದ್ಧಿ ಯೋಜನೆಯನ್ನು ತಯಾರಿಸುವ ಕಾರ್ಯಾಗಾರ

ಗ್ರಾಮಾಭಿವೃದ್ಧಿಗೆ ಕೆಳಹಂತದ ವಾರ್ಷಿಕ ಯೋಜನೆ ಅತ್ಯಂತ ಸಹಕಾರಿ

ಗದಗ : ಗ್ರಾಮಾಭಿವೃದ್ಧಿಗೆ ಕೆಳ ಹಂತದ ವಾರ್ಷಿಕ ಯೋಜನೆಗಳು ಅತ್ಯಂತ ಸಹಕಾರಿಯಾಗಿವೆ. ವಿಕೇಂದ್ರೀಕರಣ ವ್ಯವಸ್ಥೆಯಿಂದ ಹಾಗೂ ಸರಿಯಾದ ಯೋಜನೆಗಳಿಂದ ಮಹತ್ತರ ಅಭಿವೃದ್ಧಿ ಸಾಧನೆ ಸಾಧ್ಯ ಎಂದು ವಿಧಾನ ಪರಿಷತ್ ಶಾಸಕ ಡಾ. ಯತೀಂದ್ರ ಸಿದ್ಧರಾಮಯ್ಯ ಅವರು ಅಭಿಪ್ರಾಯ ಪಟ್ಟರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಸಹಯೋಗದಲ್ಲಿ ಜಿಲ್ಲಾಡಳಿತ ಭವನದ ಆಡಿಟೊರಿಯಂ ಹಾಲ್ ನಲ್ಲಿ ಶನಿವಾರ ಆಯೋಜಿಸಲಾದ ಕೆಳಹಂತದ ಯೋಜನೆಗಳೊಂದಿಗೆ ವಾರ್ಷಿಕ ಜಿಲ್ಲಾ ಅಭಿವೃದ್ಧಿ ಯೋಜನೆಯನ್ನು ತಯಾರಿಸುವ ಕಾರ್ಯಾಗಾರದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಸಂತ ರಾಜಕಾರಣಿ, ಮಾಜಿ ಶಾಸಕರಾದ ಡಿ ಆರ್ ಪಾಟೀಲ ಅವರು ವಿಕೇಂದ್ರೀಕರಣ ವ್ಯವಸ್ಥೆಯಲ್ಲಿ ಅಪಾರ ಅನುಭವ ಹಾಗೂ ಅಭಿವೃದ್ಧಿ ಮುಂದಾಲೋಚನೆ ಉಳ್ಳವರಾಗಿದ್ದರಿಂದ ನನ್ನ ತಂದೆಯವರಾದ ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದಾರಾಮಯ್ಯ ಅವರು ಡಿ ಆರ್ ಪಾಟೀಲ ಅವರನ್ನು ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರನ್ನಾಗಿ ಮಾಡಿದ್ದಾರೆ ಎಂದರು.

ಡಿ ಆರ್ ಪಾಟೀಲ ಅವರ ಅಪಾರ ಅನುಭವದಿಂದ ವಿಕೇಂದ್ರೀಕರಣ ವ್ಯವಸ್ಥೆ ಹಾಗೂ ಯೋಜನೆ ತಯಾರಿಕೆ ಕರಡು ಪ್ರತಿ ಇಗಾಗಲೇ ಗದಗ ಜಿಲ್ಲೆಯಲ್ಲಿ ಸಿದ್ದವಾಗಿದೆ. ಇದೇ ತರಹ ಮೈಸೂರಲ್ಲಿ ಸಹ ಅಭಿವೃದ್ಧಿ

ಯೋಜನೆಯ ಕರಡು ತಯಾರಿಸಲಾಗುವುದು ಎಂದು ಹೇಳಿದರು.

ವಾರ್ಡ, ಗ್ರಾಮ ಮಟ್ಟದಲ್ಲಿ ಸಭೆ ನಡೆಸಿ ತಮ್ಮ ಗ್ರಾಮದಲ್ಲಿ ಅಗತ್ಯವಾದ ಅಭಿವೃದ್ಧಿ ಕೆಲಸಗಳ ಕುರಿತು ಯೋಜನಾ ವರದಿ ಕರಡು ಸಿದ್ದಪಡಿಸಿ, ತಾಪಂ, ಜಿಪಂ ಮೂಲಕ ಸರ್ಕಾರಕ್ಕೆ ಕಳುಹಿಸಿ ಆಧ್ಯತೆ ಆದಾರದಲ್ಲಿ ಗ್ರಾಮಗಳ ಯೋಜನೆಗಳ ಅನುಷ್ಠಾನಕ್ಕೆ ಇದು ಸಹಕಾರಿ ಆಗಲಿದೆ. ಇದೊಂದು ಉತ್ತಮ ಕಾರ್ಯವಾಗಿದೆ ಎಂದು ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಅಭಿಪ್ರಾಯ ಪಟ್ಟರು.

ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ ಆರ್ ಪಾಟೀಲ ಅವರು ಪ್ರಾಸ್ತಾವಿಕ ಮಾತನಾಡಿ, ವಿಕೇಂದ್ರೀಕರಣ ವ್ಯವಸ್ಥೆ ಗ್ರಾಮ ಮಟ್ಟದಿಂದ ಬಲವರ್ದನೆಯಾಗಬೇಕು. ಆಗ ಮಾತ್ರ ಗ್ರಾಮಗಳು ಅಭಿವೃದ್ಧಿ ಯೊಂದಿಗೆ ಆರ್ಥಿಕ ಸದೃಡತೆ ಸಾಧಿಸಲಿವೆ. ರಾಜ್ಯದ ಎಲ್ಲ ಗ್ರಾಮಗಳಲ್ಲೂ ಸಹ ವಾರ್ಷಿಕ ಅಭಿವೃದ್ಧಿ ಯೋಜನೆಗಳ ಕರಡು ಪ್ರತಿ ತಯಾರಿಸಿ ಮುಂದಿನ ಹಂತಕ್ಕೆ ಕಳುಹಿಸಿಕೊಡಬೇಕು. ಅದನ್ನು ಸಹ ನಿಗದಿಪಡಿಸಿದ ಅವದಿಯೋಳಗೆ ಪೂರ್ಣವಾಗಿಸಬೇಕು ಎಂದರು.

ಕಾರ್ಯಾಗಾರದಲ್ಲಿ ಹುಬ್ಬಳ್ಳಿಯ ಹೆಸ್ಕಾಂ ಅಧ್ಯಕ್ಷ ಅಜ್ಜಂಪೀರ್ ಖಾದ್ರಿ, ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ, ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಅಶೋಕ ಮಂದಾಲಿ, ಸುಜಾತ ದೊಡ್ಡನಿ, ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ್, ಜಿ ಪಂ ಉಪ ಕಾರ್ಯದರ್ಶಿ ಸಿಆರ್ ಮುಂಡರಗಿ, ಎ ಎ ಕಂಬಾಳಿಮಠ, ಎಂ ವಿ ಚಳಗೇರಿ ಸೇರಿದಂತೆ ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು, ಪಿಡಿಓ ಗಳು ಇತರರು ಇದ್ದರು.

ಕರ್ನಾಟಕ ರಾಜ್ಯ ಪೌರ ನೀರು ಸರಬರಾಜು ನೌಕರರ ಅನಿರ್ದಿಷ್ಟಾವಧಿ ಮುಷ್ಕರ

ದಾವಣಗೆರೆ: ಕರ್ನಾಟಕ ರಾಜ್ಯ ಪೌರನೀರು ಸರಬರಾಜು ನೌಕರರ ಮಹಾಸಂಘವು ಅ.6ರಿಂದ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಹಮ್ಮಿಕೊಂಡಿರುವ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ದಾವಣಗೆರೆ ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ನೀರು ಸರಬರಾಜು ನೌಕರರು ಪಾಲ್ಗೊಳ್ಳಲಿದ್ದಾರೆ ಎಂದು ದಾವಣಗೆರೆ ಮಹಾನಗರ ಪಾಲಿಕೆ ನೀರು ಸರಬರಾಜು ಹೊರಗುತ್ತಿಗೆ ನೌಕರರ ಸಂಘ ತಿಳಿಸಿದೆ.

ಸುದ್ದಿಗೋಷ್ಠಿಯಲ್ಲಿ ಸಂಘದ ಅಧ್ಯಕ್ಷ ರುದ್ರಮುನೇಶ್ವರ ಮಾತನಾಡಿ, ನೀರು ಸರಬರಾಜು ನೌಕರರ ಖಾಯಮಾತಿ ಅಥವಾ ನೇರಪಾವತಿ ಜಾರಿಮಾಡಲು ವಿಳಂಬ ನೀತಿ ಅನುಸರಿಸುತ್ತಿರುವ ಸರ್ಕಾರದ ಧೋರಣೆ ಖಂಡಿಸಿ ಅನಿರ್ದಿಷ್ಟಾವಧಿ ಮುಷ್ಕರ ನಡೆಯಲಿದೆ ಎಂದರು.

ನೀರು ಸರಬರಾಜು ಮಾಡುವವರು ಸಹ ದಿನದ 24 ಗಂಟೆಯೂ ಕಾರ್ಯೋನ್ಮುಖರಾಗಿ ಕೆಲಸ ಮಾಡುತ್ತಾರೆ. ಹಾಗಿದ್ದರೂ ಪೌರಕಾರ್ಮಿಕರಿಗೆ ಮಾಡಿದಂತೆ ನೀರುಗಂಟಿಗಳಿಗೆ ಕೆಲಸದ ಖಾಯಮಾತಿ ಮಾಡಲು ಮೀನಾಮೇಷ ಎಣಿಸಲಾಗುತ್ತಿದೆ ಸೇರಿದಂತೆ ಇನ್ನಿತರೆ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಈ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಎಸ್.ಎಂ.ರಾಧಕೃಷ್ಣ, ಎಂ.ಬಸವರಾಜ, ಉಮೇಶ್ ಶೆಟ್ಟಿಪ್ಪ, ಅಜ್ಜಯ್ಯ, ಕೆ.ಹೆಚ್.ಮಂಜುನಾಥ್ ಇದ್ದರು.

ಹಿರಿಯ ನಾಗರೀಕರು ಸಮಾಜದ ಬೇರುಗಳು

ಹಾಸನ : ಭಾರತೀಯ ಸಂಸ್ಕೃತಿಯಲ್ಲಿ ಹಿರಿಯ ನಾಗರೀಕರ ಸ್ಥಾನ ತುಂಬ ಪ್ರಾಧ್ಯಾನತೆ ಪಡೆದಿದೆ, ಅವರು ತಮ್ಮ ಸಂಪೂರ್ಣ ಜೀವನವನ್ನು ಕುಟುಂಬ, ಸಮಾಜಹಾಗೂ ದೇಶಕ್ಕಾಗಿ ಕಳೆದಿರುತ್ತಾರೆ. ಇವರುಗಳು ದೊಡ್ಡ ಆಲದ ಮರದ ಬೇರುಗಳಿದ್ದಂತೆ ಈ ಬೇರುಗಳಿಲ್ಲದೆ ಕಲ್ಪನೆ ಮಾಡಲು ಸಾಧ್ಯವಿಲ್ಲ ಎಂದು ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ತಿಳಿಸಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿಂದು ನಗರದ ಡಾ.ಬಿ.ಆರ್‌ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಮನುಷ್ಯನ ಕಾಲಘಟ್ಟದಲ್ಲಿ ಮೂರು ಹಂತಗಳು ಬರುತ್ತವೆ. ಬಾಲ್ಯ, ಯೌವ್ವನ, ವೃದ್ಧಾಪ್ಯ ಇವುಗಳಲ್ಲಿವೃದ್ಧಾಪ್ಯ ಕಠಿಣ ಎಂದು ಭಾವಿಸಬಾರದು. ಜೀವನದ ಒಂದು ಭಾಗ ಅದನ್ನು ತುಂಬಾ ಸಂತೋಷವಾಗಿ ಗೌರವಯುತವಾಗಿ ಘನತೆಯಿಂದ ಸ್ವೀಕರಿಸಿ ಜೀವನ ಮಾಡುವುದು ಜೀವನದ ಕಲೆಯಾಗಿದೆ ಎಂದರು.

ಹಿಂದಿನ ದಿನಮಾನಗಳಿಗೆ ಹೋಲಿಕೆ ಮಾಡಿದರೆ ಇಂದಿನ ದಿನಗಳಲ್ಲಿ ಮನುಷ್ಯನ ಜೀವಿತಾವಧಿ ಹೆಚ್ಚಾಗಿದೆ ಇದಕ್ಕೆ ಕಾರಣ ಆರೋಗ್ಯದಲ್ಲಿ ಸುಧಾರಣೆಯಾಗಿರುವುದು,

ಆರೋಗ್ಯವೆ ಆಸ್ತಿ, ಹಣಕಾಸಿನ ವಿಚಾರದಲ್ಲಿ ಸ್ವತಂತ್ರವಾಗಿರಬೇಕು ಎಂದು ತಿಳಿಸಿದರು.

ವೃದ್ಧಾಪ್ಯ ಜೀವನದ ಅವಿಭಾಜ್ಯ ಅಂಗ ನಾವು. ಯಾರಿಗೂ ಭಾರವಾಗಂತೆ ಕೊನೆಯ ಉಸಿರು ಇರುವವರೆಗೂ ಆರೋಗ್ಯ ಕಾಪಾಡಿಕೊಂಡು, ಕೆಲಸ ಮಾಡಿಕೊಂಡು ಶಿಸ್ತು ಬದ್ಧವಾಗಿ ಜೀವನ ನಡೆಸಬೇಕು. ಕಿರಿಯರಿಂದ ನಿರೀಕ್ಷೆ ಕಡಿಮೆ ಮಾಡಬೇಕು ಎಂದು ತಿಳಿಸಿದರು.

ವಯಸ್ಸು ಕೇವಲ ಒಂದು ಸಂಖ್ಯೆ, ಮನಸ್ಸಿಗೆ ಜಡ್ಡು ಹಿಡಿಯದಂತೆ ಕ್ರೀಯಾಶೀಲರಾಗಿ ಯಾರ ಮೇಲು ಅವಲಂಬಿತರಾಗದೆ ಆತ್ಮ ವಿಶ್ವಾಸದಿಂದ ಜೀವನ ನಡೆಸಲು ತಿಳಿಸಿದರಲ್ಲದೆ, ಹಿರಿಯರಿಲ್ಲದ ಮನೆ ಕಳಸವಿಲ್ಲದ ಮಂದಿರವಿದ್ದಂತೆ ಹಳೇಯ ಬೇರಿನೊಂದಿಗೆ ಹೊಸ ಚಿಗುರು ಎಂಬಂತೆ ಕಿರಿಯರು ಹಿರಿಯರ ಜೊತೆಯಲ್ಲಿ ಜೀವನ ನಡೆಸಬೇಕು ಎಂದು ತಿಳಿಸಿದರು.

ಹಿರಿಯರು ಅನಿವಾರ್ಯ ಸಂದರ್ಭಗಳಲ್ಲಿ ವೃದ್ಧಾಶ್ರಮಗಳಲ್ಲಿ ಜೀವನ ನಡೆಸಲು ಸರ್ಕಾರ ಅವಕಾಶ ಕಲ್ಪಿಸಿದೆ ಎಂದರು.

ಸರ್ಕಾರ ಹಿರಿಯ ನಾಗರಿಕರ ಪಾಲನೆ ಪೋಷಣೆ ಹಾಗೂ ಸಂರಕ್ಷಣೆಗಾಗಿ ಜಾರಿಗೆ ತಂದಿರುವಕಾಯ್ದೆ ಬಗ್ಗೆ ವಿವರಿಸಿ ಯಾವುದೇ ತೊಂದರೆಗೆ ಸಿಲುಕಿದಾಗ ಕಾನೂನಾತ್ಮಕವಾಗಿ ಉಚಿತ ಸೇವೆಗಳನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ನೀಡಲಾಗುವುದು. ಯಾವುದೇ ಹಿಂಜರಿಕೆ ಮಾಡದೆ ಇದರ ಸದುಪಯೋಗ ಪಡೆದುಕೊಳ್ಳಿ ಎಂದು ತಿಳಿಸಿದರು.

ಹಿರಿಯರುದೇವಸ್ಥಾನದಕಳಸವಿದ್ದಂತೆ, ಕುಟುಂಬ ಮತ್ತು ಸಮಾಜದ ನೊಗವನ್ನೊತ್ತವರು. ಬದಲಾದ ಜೀವನ ಶೈಲಿಯಿಂದ ಹಿರಿಯರನ್ನು ಕಡೆಗಣಿಸಿ ಯುವ ಜನತೆ ಸಂಪಾದನೆಗಾಗಿ ಬೇರೆ ಕಡೆಗೆ ಹೋಗುತ್ತಿರುವುದು ಕಂಡು ಬರುತ್ತಿದೆ ಇದರಿಂದ ಮೊಮ್ಮಕ್ಕಳೊಂದಿಗೆ ಕಾಲ ಕಳೆಯುವುದರಿಂದ ವಂಚಿತರಾಗುತ್ತಿದ್ದಾರೆ ಎಂದರು.

ಜಿಲ್ಲಾ ಪಂಚಾಯ

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರ ಜಿಲ್ಲಾ ಪ್ರವಾಸ

ದಾವಣಗೆರೆ : ಮಾನ್ಯ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ.ಜಿ. ಇವರು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ.

ಅಕ್ಟೋಬರ್ 5 ರಂದು ದಾವಣಗೆರೆ ಆಗಮಿಸಿ ವಾಸ್ತವ್ಯ ಮಾಡುವರು. ಅಕ್ಟೋಬರ್ 7 ರಂದು ಬೆಳಿಗ್ಗೆ 11.30ಕ್ಕೆ ನಗರದ ಪ್ರವಾಸಿ ಮಂದಿರದಲ್ಲಿ ಜಗಳೂರು ತಾಲ್ಲೂಕು ಬಸ್ ಸ್ಟ್ಯಾಂಟ್‌ನಲ್ಲಿ ವಾಸ ಮಾಡುತ್ತಿರುವ ನಿವೇಶನ ರಹಿತ ಪರಿಶಿಷ್ಟ ಜಾತಿಯ ಅಲೆಮಾರಿ ಸಮುದಾಯಗಳ ನಿವೇಶನಕ್ಕೆ ಸಂಬಂಧಪಟ್ಟಂತೆ ಪರಿಶೀಲನೆ ಹಾಗೂ ಮುಖ್ಯಾಧಿಕಾರಿ, ತಹಶೀಲ್ದಾರ್, ಉಪನಿರ್ದೇಶಕರು, ಸಹಾಯಕ ನಿರ್ದೇಶಕರು, ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ ಮತ್ತು ಇತರೆ ಅಧಿಕಾರಿಗಳೊಂದಿಗೆ ಸಭೆ ನಡೆಸುವರು.

ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ

ದಾವಣಗೆರೆ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರಪಾಲಿಕೆ ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ದಾವಣಗೆರೆ ಇವರುಗಳ ಸಂಯುಕ್ತಾಶ್ರಯದಲ್ಲಿ ಅಕ್ಟೋಬರ್ 7 ರಂದು ಬೆಳಿಗ್ಗೆ 12 ಗಂಟೆಗೆ ನಗರದ ಎಂ.ಸಿ.ಸಿ.ಬಿ ಬ್ಲಾಕ್ ನಲ್ಲಿರುವ ಗುಂಡಿ ಮಹಾದೇವಪ್ಪ ಕಲ್ಯಾಣ ಮಂಟಪದಲ್ಲಿ ಶ್ರೀಮಹರ್ಷಿ ವಾಲ್ಮೀಕಿ ಜಯಂತಿ ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಉದ್ಘಾಟಿಸುವರು. ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪನವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್ ಭೋಜೇಗೌಡ, ಚಿದಾನಂದ. ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ರಾಜ್ಯ ಬ್ರಾಹ್ಮಣ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಆಸಗೋಡು ಜಯಸಿಂಹ, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎನ್.ಜಯದೇವನಾಯ್ಕ, ದೂಡಾ ಅಧ್ಯಕ್ಷರಾದ ದಿನೇಶ್.ಕೆ.ಶೆಟ್ಟಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶಾಮನೂರು.ಟಿ.ಬಸವರಾಜ್, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ್ ವಿಠ್ಠಲರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಭಾಗವಹಿಸುವರು.

ಅಂದು ಬೆಳಿಗ್ಗೆ 11.30ಕ್ಕೆ ಗಂಟೆಗೆ ನಗರದ ಹೊಂಡದ ಸರ್ಕಲ್ ನಲ್ಲಿರುವ ಶ್ರೀಶ್ರೀಶ್ರೀ ರಾಜವೀರ ಮದಕರಿ ನಾಯಕರ ವೃತ್ತದಿಂದ ಮೆರವಣಿಗೆ ಪ್ರಾರಂಭವಾಗಲಿದೆ ಎಂದು ಪ್ರಕಟಣೆ ತಿಳಿಸಿದೆ.

ಚನ್ನಗಿರಿ ಕೆ.ಎಸ್.ಆರ್.ಟಿ.ಸಿ ನೂತನ ಬಸ್ ಘಟಕದ ಉದ್ಘಾಟನಾ ಸಮಾರಂಭ

ದಾವಣಗೆರೆ : ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ದಾವಣಗೆರೆ ವಿಭಾಗದ ವತಿಯಿಂದ ಅಕ್ಟೋಬರ್ 8 ರಂದು ಬೆಳಿಗ್ಗೆ 11 ಗಂಟೆಗೆ ಚನ್ನಗಿರಿ (ಅಜ್ಜಿಹಳ್ಳಿ) ನೂತನ ಬಸ್ ಘಟಕದ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಉದ್ಘಾಟಿಸುವರು. ಚನ್ನಗಿರಿ ಶಾಸಕರಾದ ಬಸವರಾಜು.ವಿ.ಶಿವಗಂಗಾ ಅಧ್ಯಕ್ಷತೆ ವಹಿಸುವರು. ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಘನ ಉಪಸ್ಥಿತರಾಗಿರುವರು.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರು ಹಾಗೂ ಗುಬ್ಬಿ ಕ್ಷೇತ್ರದ ಶಾಸಕರಾದ ಎಸ್.ಆರ್ ಶ್ರೀನಿವಾಸ್ ನೂತನ ಬಸ್ ಮಾರ್ಗಗಳ ಉದ್ಘಾಟನೆಯನ್ನು ನೆರವೇರಿಸುವರು.

ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ವಿಧಾನ ಪರಿಷತ್ ಸದಸ್ಯರಾದ ಡಿ.ಎಸ್ ಅರುಣ್, ಡಾ.ಧನಂಜಯ ಸರ್ಜಿ, ಬಯಲು ಸೀಮೆ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಹೆಚ್.ಬಿ.ಮಂಜಪ್ಪ, ಕರ್ನಾಟಕ ಜೀವ ವೈವಿಧ್ಯ ನಿಗಮ ಮಂಡಳಿಯ ಅಧ್ಯಕ್ಷರಾದ ವಡ್ನಾಳ್ ಜಗದೀಶ್, ಕ.ರಾ.ರ.ಸಾ.ನಿಗಮದ ಉಪಾಧ್ಯಕ್ಷರಾಧ ಮಹಮ್ಮದ್ ರಿಜ್ವಾನ್ ನವಾಬ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶಾಮನೂರು.ಟಿ.ಬಸವರಾಜ್,ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಸಿ.ಹಚ್ ಶ್ರೀನಿವಾಸ್, ಅಜ್ಜಿಹಳ್ಳಿ ಗ್ರಾ.ಪಂ ಅಧ್ಯಕ್ಷರಾದ ಗೋವಿಂದರಾಜ್ ಆರ್, ಉಪಾಧ್ಯಕ್ಷರಾದ ಸವಿತ.ಟಿ.ಆರ್ ಅಂಜಿನಪ್ಪ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಶಮ್ಲಾ ಇಕ್ಬಾಲ್, ಸಾರಿಗೆ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಡಾ.ಎಸ್.ವಿ ಪ್ರಸಾದ್, ವ್ಯವಸ್ಥಾಪಕ ನಿರ್ದೇಶಕರಾದ ಅಕ್ರಂಪಾಷ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ್ ವಿಠ್ಠಲ್ ರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಭಾಗವಹಿಸುವವರು.

ಜಿಲ್ಲಾ ಮಟ್ಟದ ಯುವಜನೋತ್ಸವ

ದಾವಣಗೆರೆ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ದಾವಣಗೆರೆ, ನೆಹರು ಯುವ ಕೇಂದ್ರ, ಸರ್ಕಾರಿ ಪ್ರಥಮ ದರ್ಜೆ ಕಾಲೇಜು ದಾವಣಗೆರೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ದಾವಣಗೆರೆ ಹಾಗೂ ವಿವಿಧ ಸಂಘ-ಸಂಸ್ಥೆಗಳ ಸಹಯೋಗದೊಂದಿಗೆ ಅಕ್ಟೋಬರ್ 15 ರಂದು ನಗರದ ದೃಶ್ಯ ಕಲಾ ಮಹಾವಿದ್ಯಾಲಯ ಜಿಲ್ಲಾ ಮಟ್ಟದ ಯುವಜನೋತ್ಸವವನ್ನು ಆಯೋಜಿಸಲಾಗಿದೆ.

ಭಾಗವಹಿಸಲು ಇಚ್ಛಿಸುವ ಸ್ಪರ್ಧಾಳುಗಳು ಅ.13 ಮತ್ತು 14 ರಂದು ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ದಾವಣಗೆರೆ ಇಲ್ಲಿ ತಮ್ಮ ಆಧಾರ್ ಕಾರ್ಡ್ & ಜನನ ಪ್ರಮಾಣ ಪತ್ರದೊಂದಿಗೆ ನಿಗಧಿತ ಅರ್ಜಿ ನಮೂನೆಯನ್ನು ಪಡೆದು ತಮ್ಮ ಹೆಸರುಗಳನ್ನು ನೋಂದಣಿ ಮಾಡಿಕೊಳ್ಳಬಹುದು. ಅಥವಾ ಅ.15 ರಂದು ದೃಶ್ಯ ಕಲಾ ಮಹಾವಿದ್ಯಾಲಯ, ಇಲ್ಲಿ ಬೆಳಿಗ್ಗೆ 9 ರಿಂದ 10.30 ರ ಒಳಗಾಗಿ ನೋಂದಣಿ ಮಾಡಿಕೊಳ್ಳಬಹುದು.

ಜಿಲ್ಲಾ ಮಟ್ಟದ ಯುವಜನೋತ್ಸವದಲ್ಲಿ ಭಾಗವಹಿಸುವ ಸ್ಪರ್ಧಾಳುಗಳು 15 ರಿಂದ 29 ವರ್ಷದೊಳಗಿನ ಯುವಕ, ಯುವತಿಯರು ಮಾತ್ರ ಭಾಗವಹಿಸಬಹುದು. ದಾವಣಗೆರೆ ಜಿಲ್ಲೆಯ ಎಲ್ಲಾ ಯುವಕ, ಯುವತಿಯರು, ಸಂಘ-ಸಂಸ್ಥೆಗಳ ಪ್ರತಿನಿಧಿಗಳು, ಶಾಲಾ, ಕಾಲೇಜು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಭಾಗವಹಿಸಬಹುದಾಗಿದೆ. ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಸ್ಪರ್ಧಿಗಳ ಮಾತ್ರ ರಾಜ್ಯ ಮಟ್ಟದ ಯುವಜನೋತ್ಸವದಲ್ಲಿ ಭಾಗವಹಿಸಲು ಅವಕಾಶ ಇರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ದಾವಣಗೆರೆ ದೂ.ಸಂ: 08192-237480 ಸಂಪರ್ಕಿಸಬಹುದು ಎಂದು ಇಲಾಖೆಯ ಸಹಾಯಕ ನಿರ್ದೇಶಕರಾದ ಹರ್ಷ ತಿಳಿಸಿದ್ದಾರೆ.

ಚಿರಂತನದಿಂದ ಇಂಡೋನೇಷ್ಯಾದ ಬಾಲಿಯಲ್ಲಿ ಅಂತರರಾಷ್ಟ್ರೀಯ ಸಾಂಸ್ಕೃತಿಕ ಉತ್ಸವ...

ದಾವಣಗೆರೆ: ಖ್ಯಾತ ಸಾಂಸ್ಕೃತಿಕ ಸಂಸ್ಥೆ ಚಿರಂತನ, 6ನೇ ಅಂತರಾಷ್ಟ್ರೀಯ ಸಂಗೀತ ನೃತ್ಯೋತ್ಸವವನ್ನು ಬಾಲಿ ಯ ಇಂಡೋನೇಷಿಯನ್ ಇನ್ಸ್ಟಿಟ್ಯೂಟ್ ಆಫ್ ಆರ್ಟ್ಸ್ ನಲ್ಲಿ ಅಕ್ಟೋಬರ್ 8, 2025 ರಂದು ಸಿಟ್ರಾ ಕೆಲಾಂಜೆನ್ ಹಾಲ್ ನಲ್ಲಿ ಆಯೋಜಿಸಿದೆ.

ದಾವಣಗೆರೆಯಲ್ಲಿ ಕಳೆದ 23 ವರ್ಷಗಳಿಂದ ಸಕ್ರಿಯವಾಗಿ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವ ಸ್ಥಳೀಯ ಸಂಸ್ಥೆಯೊಂದು ಇಂಡೋನೇಷಿಯಾ ದೇಶದ ಸರ್ಕಾರದೊಂದಿಗೆ ಕೈಜೋಡಿಸಿ ಒಂದು ಬೃಹತ್ ಸಂಗೀತ, ನೃತ್ಯೋತ್ಸವವನ್ನು ಆಯೋಜಿಸಿರುವುದು ದಾವಣಗೆರೆಗೆ ಹೆಮ್ಮೆಯ ವಿಷಯ. ಇಂಡೋನೇಷಿಯಾದ ಮಂತ್ರಿಗಳಾದ ಡಾ. ಇ. ಗುಸ್ತಿ ನೂರ ಆರ್ಯವೇದಕರ್ಣ ಮಹೇಂದ್ರದತ್ತ ರವರ ಸಹಯೋಗದಲ್ಲಿ ಇಂಡೋನೇಷ್ಯಾದ ಸರ್ಕಾರದ ವಿವಿಧ ಸಂಸ್ಥೆಗಳೊಂದಿಗೆ ಹಾಗೂ ಇಂಡೋನೇಷಿಯನ್ ಇನ್ಸ್ಟಿಟ್ಯೂಟ್ ಆಫ್ ಆರ್ಟ್ಸ್ ಮತ್ತು ಮಹೇಂದ್ರದತ್ತ ಯುನಿವರ್ಸಿಟಿ ಯೊಂದಿಗೆ ಈ ಅಂತರಾಷ್ಟ್ರೀಯ ಸಂಗೀತ ನೃತ್ಯೋತ್ಸವವನ್ನು ಹಮ್ಮಿಕೊಳ್ಳಲಾಗಿದೆ.

ಅಮೇರಿಕಾ, ಆಸ್ಟ್ರೇಲಿಯಾ, ಮಲೇಶಿಯಾ,ಬಾಲಿ ಹಾಗೂ ಭಾರತದಿಂದ ಹೈದರಾಬಾದ್-, ಬೆಂಗಳೂರು, ಹಾಸನ ಮತ್ತು ದಾವಣಗೆರೆಯ ಚಿರಂತನ ತಂಡ ಒಳಗೊಂಡಂತೆ 80ಕ್ಕೂ ಹೆಚ್ಚು ಕಲಾವಿದರು ನೃತ್ಯ ಪ್ರದರ್ಶನ ನೀಡಲಿದ್ದಾರೆ. * ಡಾ॥ ಸಂಜಯ್ ಶಾಂತರಾಮ್, ಶಿವಪ್ರಿಯ ಸ್ಕೂಲ್ ಆಫ್ ಡಾನ್ಸ್ ಬೆಂಗಳೂರು, ಶ್ರೀಮತಿ ಸಮಿದ ಸತ್ಯಂ ಸಂಸ್ಥಾರ

ಸ್ಕೂಲ್ ಆಫ್ ಕುಚುಪುಡಿ ಡ್ಯಾನ್ಸ್ ಅಮೇರಿಕಾ, ವಿದುಷಿ ಶುಭ್ರತಾ ಪ್ರಭಾಕರ್ ನೃತ್ಯ ವಿಹಾರ ಸ್ಕೂಲ್ ಆಫ್ ಆರ್ಟ್ಸ್ ಹಾಸನ, ಡಾ॥ ಪ್ರಿಯಾಂಕ ಭರಡೆ ಹಿರಣ್ಮಯಿ ನೃತ್ಯಾಲಯ ಹೈದರಾಬಾದ್, ಡಾಕ್ಟರ್ ಶರ್ಮಿಳಾ ಸುಬ್ರಹ್ಮಣ್ಯಂ ಎಸ್. ಬಿ. ಎನ್. ಎ. ಪರ್ಫಾರ್ಮಿಂಗ್ ಆರ್ಟ್ಸ್ ಮಲೇಶಿಯಾ, ಶ್ರೀಮತಿ ಸುಪ್ರಿಯ ನಾಟ್ಯಗೃಹ ಅಕಾಡೆಮಿ ಆಸ್ಟ್ರೇಲಿಯಾ, ಮತ್ತು ಚಿರಂತನ ಅಕಾಡೆಮಿ ದಾವಣಗೆರೆ.

ಈ ಎಲ್ಲಾ ಸಂಸ್ಥೆಗಳಿಂದ ಕಲಾವಿದರು ಬಾಲಿ ಗೆ ಪ್ರಯಾಣ ಬೆಳೆಸಿದ್ದಾರೆ.

2025 ರ ಜನವರಿಯಲ್ಲಿ ಚಿರಂತನದ ಅಧ್ಯಕ್ಷೆ ಶ್ರೀಮತಿ ದೀಪ ಎನ್ ರಾವ್ ರವರು ಬಾಲಿಗೆ ಹೋಗಿ ಅಲ್ಲಿಯ ಡಾ॥ ಇ ಗುಸ್ತಿ ನೂರ ಆರ್ಯವೇದಕರ್ಣ ಮಹೇಂದ್ರದತ್ತ ರೊಂದಿಗೆ ಕಾರ್ಯಕ್ರಮವನ್ನು ಆಯೋಜಿಸುವ ಬಗ್ಗೆ ಮಾತುಕತೆ ನಡೆಸಿದ್ದರು ಕಾರ್ಯಕ್ರಮವನ್ನು ಆಯೋಜಿಸುವ ಬಗ್ಗೆ ಅವರೊಂದಿಗೆ ಚರ್ಚೆ ನಡೆಸಿದ್ದರು,

ಬಾಲಿಯಲ್ಲಿ ಭಾರತೀಯರ ಸಂಖ್ಯೆ ಬಹಳ ಕಡಿಮೆ. ಆದ್ದರಿಂದ ಈ ಕಾರ್ಯಕ್ರಮಕ್ಕೆ ಬಾಲಿ ಯ ಸ್ಥಳೀಯರೇ 300 ಕ್ಕೂ ಹೆಚ್ಚು ಪ್ರೇಕ್ಷಕರು ಆಗಮಿಸುತ್ತಿರುವುದು ನಿಜಕ್ಕೂ ವಿಶೇಷ. " ಅರ್ಧ ನಾರೇಶ್ವರ " ಶಿವನ ಬಗೆಗಿನ ನೃತ್ಯರೂಪಕ , ವಿಷ್ಣುವಿನ ನರಸಿಂಹ ನ ಅವತಾರ ಯಮುನಾ ನದಿಯ ಸೌಂದರ್ಯ, ಮೇಳಪಟ್ಟಿ ಎಂಬ ವಿಶೇಷ ಭರತನಾಟ್ಯ ಪ್ರದರ್ಶನ, ಕಂಡೆ ಕಂಡೆ ಪರಶಿವನ ಎಂಬ ಜಾನಪದ ನೃತ್ಯ ಪ್ರದರ್ಶನ, ಬೇಲೂರು ಶಿಲಾಬಾಲಕಿಯರ ಬಗೆಗಿನ ನೃತ್ಯ ಪ್ರಸ್ತುತಿಗಳು, ಸೇರಿದಂತೆ ಬಾಲಿ ಯ ಸಾಂಪ್ರದಾಯಿಕ ನೃತ್ಯಗಳು ಸುಮಾರು 3 ಗಂಟೆಗಳ ಕಾಲ ಬಾಲಿ ಪ್ರೇಕ್ಷಕರನ್ನು ಕಲಾವಿದರು ರಂಜಿಸಲಿದ್ದಾರೆ. ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಡಾ॥ ಇ ಗುಸ್ತಿ ನೂರ ಆರ್ಯವೇದಕರ್ಣ ಮಹೇಂದ್ರದತ್ತ ರವರು ಖ್ಯಾತ ಪರಿಸರವಾದಿಗಳಾದ ಜೆರೋಧಾ ದ ಕರ್ನಾಟಕ ಕಲಾಶ್ರೀ ರೇವತಿ ಕಾಮತ್ ರವರು ಆಗಮಿಸುತ್ತಿದ್ದಾರೆ.

ಎಲ್ಲಾ ನೃತ್ಯ ಗುರುಗಳಿಗೆ ಅಂತರಾಷ್ಟ್ರೀಯ ಮಟ್ಟದ ಅವಾರ್ಡ್ ಗಳನ್ನು ನೀಡಲಾಗುತ್ತಿದೆ. ಸುಮಾರು ಎರಡು ದಶಕಗಳಿಂದ ದಾವಣಗೆರೆಯಲ್ಲಿ ಹಾಗೂ ಯೋಗ ಕ್ಷೇತ್ರ ದಲ್ಲಿ ಸತತವಾಗಿ ದುಡಿಯುತ್ತಿರುವ ಶ್ರೀಯುತ ವಾಸುದೇವ್ ರಾಯ್ಕರ್ ರವರಿಗೆ International Business and Service Excellence ಅವಾರ್ಡನ್ನು ನೀಡಿ ಸನ್ಮಾನಿಸಲಾಗುತ್ತಿದೆ ಮತ್ತು ಜೆ ಸಿ ಐ ಸಂಸ್ಥೆಯ ಮುಖಾಂತರ ಹತ್ತು ದಶಕಗಳಿಂದ ಸಮಾಜಸೇವೆ ಹಾಗೂ ಸಾಂಸ್ಕೃತಿಕ ಸೇವೆ ಎನ್ನು ಹಲವಾರು ಸಂಸ್ಥೆಗಳ ಮುಖಾಂತರ ಮಾಡುತ್ತಾ ಬಂದಿರುವ ಶ್ರೀಮತಿ ಅಲಕನಂದ ಎಂ ಎಸ್ ರವರಿಗೂ ಕೂಡ International leadership & Service ಅವಾರ್ಡನ್ನು ನೀಡಿ ಸನ್ಮಾನಿಸಲಾಗುತ್ತಿದೆ, ಬೆಂಗಳೂರಿನ ಶ್ರೀಮತಿ ನವಿದ ಹಾಗೂ ಶ್ರೀಯುತ ರಮೇಶ್ ರವರಿಗೂ ಮತ್ತು ಬಾಲಿ ಯಲ್ಲಿ ಹಲವಾರು ವರ್ಷಗಳಿಂದ ಸಮಾಜ ಸೇವೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಯನ್ನು ಮಾಡುತ್ತಾ ಬಂದಿರುವ ಶ್ರೀಮತಿ ಸೋನಿಯಾ ಕೌರ್, ಶ್ರೀ ಸುಪ್ರಿಯಾದಿ ಹೀಗೆ 8 ಜನ ಗಣ್ಯರನ್ನು ಈ ಸಂದರ್ಭದಲ್ಲಿ ಬಾಲಿ ಸರ್ಕಾರದ ಸಹಯೋಗದಲ್ಲಿ ಚಿರಂತನ ಸಂಸ್ಥೆ ಸನ್ಮಾನಿಸುತ್ತಿದೆ.

ಚಿರಂತನದ ವಿದ್ಯಾರ್ಥಿನಿಯರಾದ ಅದಿತಿ, ವೈಷ್ಣವಿ, ಆದ್ಯ, ನವ್ಯ ಮತ್ತು ತನುಜ ಭರತನಾಟ್ಯ ಹಾಗೂ ಜನಪದ ನೃತ್ಯಗಳನ್ನು ಪ್ರದರ್ಶಿಸಲಿದ್ದಾರೆ.

ಸುಮಾರು 120 ಕಲಾವಿದರು ಹಾಗೂ ಅವರ ಪೋಷಕರು ಈ ಕಾರ್ಯಕ್ರಮದಲ್ಲಿ 5 ದೇಶಗಳಿಂದ ಪಾಲ್ಗೊಳ್ಳಲಿದ್ದು ಬಾಲಿ ಸರ್ಕಾರದ ಸಹಯೋಗದಲ್ಲಿ ವಿಶೇಷವಾಗಿ ಕಾರ್ಯಕ್ರಮವನ್ನು ಚಿರಂತನ ಆಯೋಜಿಸಿದೆ,

ಹಾವುಗಳ ಬಗ್ಗೆ ಅಧ್ಯಯನ ಮಾಡಿ, ಅವುಗಳ ರಕ್ಷಣೆಗೆ ಪ್ರತಿಯೊಬ್ಬರೂ ಪ್ರಯತ್ನಿಸಬೇಕು

ಚಿತ್ರದುರ್ಗ: ವಿಶ್ವಾದ್ಯಂತ ಹಾವು ಕಡಿಸಿಕೊಂಡು ಸಾಕಷ್ಟು ಜನರು ಸಾವನ್ನಪ್ಪಿದ್ದಾರೆ ಹಾಗೂ ಅಂಗವಿಕಲರಾಗಿದ್ದಾರೆ, ಅದರಲ್ಲಿ ಭಾರತದಲ್ಲಿಯೂ ಸಹ ಹೆಚ್ಚಿನ ಮಟ್ಟದಲ್ಲಿ ಜನರು ಹಾವು ಕಡಿತದಿಂದ ಸಾವನ್ನಪ್ಪುತ್ತಿದ್ದಾರೆ ಅಥವಾ ಅಂಗವಿಕಲರಾಗಿದ್ದಾರೆ. ಹಾಗಾಗಿ ಭಾರತದಲ್ಲಿ ಹಾವುಗಳ ಬಗ್ಗೆ ವೈಜ್ಞಾನಿಕ ತಿಳುವಳಿಕೆಯನ್ನು ನೀಡಿ, ಜನರನ್ನ ಎಚ್ಚರಿಸಿ, ಹಾವುಗಳ ರಕ್ಷಣೆ ಜೊತೆಜೊತೆಗೆ ಮನುಷ್ಯರನ್ನು ಸಹ ರಕ್ಷಿಸಿಕೊಳ್ಳುವಂತಹ ಮಾರ್ಗಗಳನ್ನು ಕಂಡುಕೊಳ್ಳಬೇಕಾಗಿದೆ ಎಂದು ಹಾವುಗಳ ರಕ್ಷಕ, ಉರಗ ಪ್ರೇಮಿ, ಸ್ನೇಕ್ ಶಿವು ಮಾತನಾಡಿದರು.

ಅವರು ಚಿತ್ರದುರ್ಗ ನಗರದ ಸ್ಟೇಡಿಯಂ ಹತ್ತಿರ ಇರುವ ಸರ್ಕಾರಿ ಕಲಾ ಕಾಲೇಜಿನಲ್ಲಿ ಅರಣ್ಯ ಇಲಾಖೆ ಆಯೋಜಿಸಿದ್ದ 71ನೇ ವನ್ಯಜೀವಿ ಸಪ್ತಾಹದ ಕಾರ್ಯಕ್ರಮದಲ್ಲಿ ಹಾವುಗಳ ಬಗ್ಗೆ ಜಾಗೃತಿ ಮೂಡಿಸಲು ಮಾತನಾಡುತ್ತಿದ್ದರು.

ಭಾರತದಲ್ಲಿ ಸುಮಾರು 275 ಜಾತಿಯ ಹಾವುಗಳು ಕಂಡುಬರುತ್ತವೆ. ಅದರಲ್ಲಿ ಕೆಲವು ವಿಷಕಾರಿ ಹಾವುಗಳು ಉಂಟು,

ನಾಗರಹಾವು, ಕಟ್ಟು ಹಾವು, ರಸೆಲ್ಸ್ ವೈಪರ್ ಕೊಳಕ ಮಂಡಲ, ಸಾ-ಸ್ಕೇಲ್ಡ್ ವೈಪರ್, ಹಪ್ಪಾಟಿ ಹಾವು, ಕಾಳಿಂಗ ಸರ್ಪ, ಇವುಗಳ ಬಗ್ಗೆ ಎಚ್ಚರಿಕೆವಹಿಸಿ, ಹಾವು ಕಡಿದ ತಕ್ಷಣ ವ್ಯಕ್ತಿಯನ್ನ ಆಸ್ಪತ್ರ

ಮೈಸೂರು: ಮುಂದಿನ ವರ್ಷಗಳಲ್ಲೂ ದಸರಾದಲ್ಲಿ ನಾನೇ ಪುಷ್ಪಾರ್ಚನೆ: ಸಿಎಂ

ಮೈಸೂರು: ಮುಂದಿನ ವರ್ಷಗಳಲ್ಲಿಯೂ ನಾನೇ ದಸರಾ ಉತ್ಸವದಲ್ಲಿ ಪುಷ್ಪಾರ್ಚನೆ ಮಾಡುತ್ತೇನೆಂಬ ಭರವಸೆ ಇದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ನಗರದ ಮಂಡಕಳ್ಳಿ ವಿಮಾನ ನಿಲ್ದಾಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಡಹಬ್ಬ ದಸರಾ ವೇಳೆಗೆ ಮುಖ್ಯಮಂತ್ರಿಗಳು ಪುಷ್ಪಾರ್ಚನೆ ಮಾಡುವುದಿಲ್ಲ ಎಂದು ಹೇಳಿದ್ದ ವಿಪಕ್ಷಗಳು ಭವಿಷ್ಯಕಾರರಲ್ಲ. ವಸ್ತುಸ್ಥಿತಿಯ ಬಗ್ಗೆ ಅರಿವಿಲ್ಲದೇ ಮಾತನಾಡುವ ವಿಪಕ್ಷಗಳ ಭವಿಷ್ಯ ನಿಜವಾಗುವುದಿಲ್ಲ. ಎರಡನೇ ಬಾರಿಗೆ ಮುಖ್ಯಮಂತ್ರಿಯಾಗಲು, ಬಜೆಟ್ ಮಂಡಿಸಲು ಸಾಧ್ಯವಿಲ್ಲವೆಂದಿದ್ದರು. ಆದರೂ ನಾನೇ ಎರಡನೇ ಬಾರಿಗೂ ಮುಖ್ಯಮಂತ್ರಿಯಾಗಿ ಮುಂದುವರೆದು ಬಜೆಟ್ ಮಂಡಿಸಿದ್ದೇನೆ ಎಂದರು.

ಆದರೆ ಪಕ್ಷದ ವರಿಷ್ಠರ ಆದೇಶದಂತೆ ಎಲ್ಲರೂ ನಡೆಯಬೇಕಿದೆ. ಮುಂದಿನ ವರ್ಷಗಳಲ್ಲಿಯೂ ನಾನೇ ದಸರಾ ಉತ್ಸವದಲ್ಲಿ ಪುಷ್ಪಾರ್ಚನೆ ಮಾಡುತ್ತೇನೆಂಬ ಭರವಸೆ ಇದೆ ಎಂದು ಹೇಳುವ ಮೂಲಕ ಡಿಕೆ ಶಿವಕುಮಾರ್ ಕನಸಿಗೆ ಕೊಳ್ಳಿ ಇಟ್ಟರು.

ದಸರಾ ಉದ್ಘಾಟಕರ ಬಗ್ಗೆ ಬಿಜೆಪಿಯವರು ವಿರೋಧದ ಧ್ವನಿಯೆತ್ತಿದ್ದರು. ಕರ್ನಾಟಕ ಜಾತ್ಯಾತೀತ ರಾಜ್ಯವಾಗಿದ್ದು, ಸಂವಿಧಾನದ ಬಗ್ಗೆ ಅರಿವಿಲ್ಲದವರೇ ಇಂತಹ ವಿರೋಧವನ್ನು ವ್ಯಕ್ತಪಡಿಸುತ್ತಾರೆ. ಆದ್ದರಿಂದ ಸುಪ್ರೀಂ ಕೋರ್ಟ್ ನಲ್ಲಿಯೂ ಕೂಡ ಅವರ ವಿರೋಧ-ಕ್ಕೆ ಛೀಮಾರಿಯಾಯಿತು. ದಸರಾ ಉತ್ಸವ ರಾಜಕೀಯದ ವಿಷಯವಲ್ಲ ಎಂದರು.

ವಿಶ್ವ ವಿಖ್ಯಾತ ನಾಡಹಬ್ಬ ಮೈಸೂರು ದಸರಾಗೆ ಈ ಬಾರಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಆಗಮಿಸಲಿದ್ದಾರೆ ಹೀಗಾಗಿ ಉತ್ತಮವಾಗಿ ದಸರಾ ಕಾರ್ಯಕ್ರಮಗಳು ನಡೆಯುತ್ತಿದೆ. ದಸರಾದಲ್ಲಿ ಏರ್ ಶೋ, ದೀಪಾಲಂಕಾರ, ಡ್ರೋನ್ ಶೋ ಸೇರಿದಂತೆ ವಿವಿಧ ಕಾರ್ಯಕ್ರಮಗಳು ಜನಪ್ರಿಯವಾಗಿದೆ. ಜನರು ಸಂತಸದಿಂದ ಪಾಲ್ಗೊಳ್ಳುವುದೇ ದಸರಾ ಉತ್ಸವವಾಗಿದೆ, ದಸರಾ ಆಚರಣೆಯಲ್ಲಿ ನಾನು ಯಾವುದೇ ಹಸ್ತಕ್ಷೇಪ ಮಾಡಿಲ್ಲ ಆದರೂ ಎಲ್ಲವು ಉತ್ತಮವಾಗಿ ನಡೆದುಕೊಂಡು ಹೋಗುತ್ತಿದೆ.

ಚಾಮುಂಡೇಶ್ವರಿ ಅಭಿವೃದ್ಧಿ ಪ್ರಾಧಿಕಾರ, ವಸ್ತು ಪ್ರದರ್ಶನ ಪ್ರಾಧಿಕಾರ ಈಗಾಗಲೇ ಅಸ್ತಿತ್ವದಲ್ಲಿರುವುದರಿಂದ ದಸರಾ ಪ್ರಾಧಿಕಾರದ ಅವಶ್ಯಕತೆ ಇಲ್ಲ ಎಂಬುದು ನನ್ನ ವೈಯಕ್ತಿಕ ಅಭಿಪ್ರಾಯವಾಗಿದೆ ಎಂದು ಹೇಳಿದರು.

ಪದವಿ ವಿದ್ಯಾರ್ಥಿಗಳ ಮೊದಲ ಆಂತರಿಕ ಪರೀಕ್ಷೆ ಮುಂದೂಡಲು ಆಗ್ರಹ

ಎಐಡಿಎಸ್‌ಓ ನೇತೃತ್ವದಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆ

ದಾವಣಗೆರೆ: ವಿಶ್ವವಿದ್ಯಾಲಯ ಸೆಮಿಸ್ಟರ್ ಪರೀಕ್ಷೆಗಳನ್ನು ಮುಂದೂಡಬೇಕೆಂದು ಆಗ್ರಹಿಸಿ ನಗರದ ಶ್ರೀ ಜಯದೇವ ಮುರುಘರಾಜೇಂದ್ರ ವೃತ್ತದಲ್ಲಿ ಎಐಡಿಎಸ್‌ಓ ನೇತೃತ್ವದಲ್ಲಿ ನೂರಾರು ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದರು.

ರಾಜ್ಯದ ಎಲ್ಲ ಸರ್ಕಾರಿ ಪದವಿ ಕಾಲೇಜುಗಳು ಅತಿಥಿ ಉಪನ್ಯಾಸಕರ ಮೇಲೆ ಅವಲಂಬಿತವಾಗಿದ್ದು, ಇಲ್ಲಿಯವರೆಗೂ ತರಗತಿಗಳು ಸರಿಯಾಗಿ ನಡೆಯದಿರುವುದರಿಂದ ವಿದ್ಯಾರ್ಥಿಗಳು ಆತಂಕದಲ್ಲಿದ್ದಾರೆ. ಇದು ಅವರ ಶೈಕ್ಷಣಿಕ ಭವಿಷ್ಯವನ್ನು ಅತಂತ್ರವಾಗಿಸಿದೆ. ಮುಂದಿನ ವಾರ ಪದವಿ ವಿದ್ಯಾರ್ಥಿಗಳ ಮೊದಲ ಆಂತರಿಕ ಪರೀಕ್ಷೆಗಳು ನಡೆಯಬೇಕಿದ್ದು, ತರಗತಿಗಳು ಸರಿಯಾಗಿ ನಡೆದಿಲ್ಲ ಎಂದು ಎಐಡಿಎಸ್‌ಓ ಜಿಲ್ಲಾಧ್ಯಕ್ಷೆ ಪೂಜಾ ನಂದಿಹಳ್ಳಿ ಹೇಳಿದರು.

ಸರ್ಕಾರ ಈಗಷ್ಟೇ ಹೊರಡಿಸಿದ ಸುತ್ತೋಲೆಯನ್ನು ಸ್ವಾಗತಿಸುತ್ತೇವೆ. ಹಿಂದಿನ ಶೈಕ್ಷಣಿಕ ವರ್ಷದ ಅತಿಥಿ ಉಪನ್ಯಾಸಕರನ್ನೇ ಮುಂದುವರಿಸುವುದಾಗಿ ಸರ್ಕಾ ಸುತ್ತೋಲೆ ಹೊರಡಿಸಿರುವುದು ವಿದ್ಯಾರ್ಥಿ ಹೋರಾಟದ ಅಭೂತಪೂರ್ವ ಜಯವಾಗಿದೆ. ಹೋರಾಟದಿಂದ ಮಾತ್ರ ಬದಲಾವಣೆ ಸಾಧ್ಯ ಎಂಬ ಸಂದೇಶವನ್ನು ಕರ್ನಾಟಕದ ವಿದ್ಯಾರ್ಥಿಗಳು ಈ ಮೂಲಕ ಎಲ್ಲೆಡೆ ಸಾರಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಸಂಘಟನಕಾರ ಎಚ್. ಡಿ. ಗಂಗಾಧರ್, ಜಿಲ್ಲಾ ಕಾರ್ಯದರ್ಶಿ ಸುಮನ್ ಟಿ. ಎಸ್., ಹಲವು ಕಾಲೇಜುಗಳ ವಿದ್ಯಾರ್ಥಿಗಳಾದ ಸಿದ್ದಿಕ್ ಅವರಗೆರೆ, ವಿಕಾಸ್ ಎಂ. ಆರ್., ಗಂಗಾಧರ್ ಎನ್., ಪ್ರೇಮಾ, ವರಲಕ್ಷ್ಮಿ ಸೇರಿದಂತೆ ಇತರ ವಿದ್ಯಾರ್ಥಿಗಳು ಹಾಜರಿದ್ದರು. ನಂತರ ವಿಶ್ವವಿದ್ಯಾಲಯದ ಪರೀಕ್ಷಾಂಗ ಕುಲಸಚಿವರಿಗೆ ವಿದ್ಯಾರ್ಥಿಗಳ ನಿಯೋಗ ಮನವಿ ಪತ್ರ ಸಲ್ಲಿಸಿತು.

ಅ.6 ಲಕ್ಕವಳ್ಳಿಯಲ್ಲಿ ಸಮುದಾಯ ಆರೋಗ್ಯ ಕೇಂದ್ರದ ಕಟ್ಟಡ ಉದ್ಘಾಟನೆ

ಚಿಕ್ಕಮಗಳೂರು, ಅ.4: ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಶ್ರಯದಲ್ಲಿ ಅಕ್ಟೋಬರ್ 6 ರಂದು ಮಧ್ಯಾಹ್ನ 12 ಗಂಟೆಗೆ ಲಕ್ಕವಳ್ಳಿ ಗ್ರಾಮದಲ್ಲಿ 30 ಹಾಸಿಗೆಗಳ ಸಮುದಾಯ ಆರೋಗ್ಯ ಕೇಂದ್ರದ ನೂತನ ಕಟ್ಟಡ ಉದ್ಘಾಟನೆಗೊಳ್ಳಲಿದೆ.

ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದು, ಮಾನ್ಯ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾದ ಶ್ರೀ ದಿನೇಶ್ ಗುಂಡೂರಾವ್, ವಿಧಾನ ಪರಿಷತ್ ಮಾನ್ಯ ಉಪ ಸಭಾಪತಿಗಳಾದ ಶ್ರೀ ಎಂ.ಕೆ.ಪ್ರಾಣೇಶ್ ಪಾಲ್ಗೊಳ್ಳುವರು.

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ, ವಿಧಾನ ಪರಿಷತ್ ಸದಸ್ಯರು ಹಾಗೂ ಅನಿವಾಸಿ ಭಾರತೀಯ ಕೋಶದ ಉಪಾಧ್ಯಕ್ಷರಾದ ಡಾ.ಆರತಿ ಕೃಷ್ಣ, ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ಶ್ರೀನಿವಾಸ್ ಭಾಗವಹಿಸುವರು.

ಶಾಸಕರಾದ ಜಿ.ಹೆಚ್.ಶ್ರೀನಿವಾಸ್ ಅಧ್ಯಕ್ಷತೆ ವಹಿಸಲಿದ್ದು, ಉಡುಪಿ-ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ, ರಾಜ್ಯಸಭೆ ಸದಸ್ಯರಾದ ಜೈರಾಮ್ ರಮೇಶ್, ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೇಯಸ್ ಎಂ.ಪಟೇಲ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಶಾಸಕರುಗಳಾದ ಕೆ.ಎಸ್.ಆನಂದ್, ಹೆಚ್.ಡಿ.ತಮ್ಮಯ್ಯ, ನಯನ ಮೋಟಮ್ಮ, ವಿಧಾನ ಪರಿಷತ್ ಸದಸ್ಯರುಗಳಾದ ಸಿ.ಟಿ.ರವಿ, ಡಾ.ಧನಂಜಯ ಸರ್ಜಿ, ಭದ್ರಾ ಕಾಡಾ ಅಧ್ಯಕ್ಷರಾದ ಡಾ.ಕೆ.ಪಿ.ಅಂಶುಮಂತ್, ಕ.ರಾ.ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷರಾದ ಬಿ.ಹೆಚ್.ಹರೀಶ್, ಲಕ್ಕವಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಅಬ್ದುಲ್ ರೆಹಮಾನ್ ಭಾಗವಹಿಸುವರು.

ವಿಶೇಷ ಆಹ್ವಾನಿತರಾಗಿ ಕಂದಾಯ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಾಜೇಂದರ್ ಕುಮಾರ್ ಕಠಾರಿಯಾ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷಗುಪ್ತ ಪಾಲ್ಗೊಳ್ಳುವರು.

ಬೆಳಗಾವಿ ಬಿಮ್ಸ್ ಆವರಣದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡ ಉದ್ಘಾಟಿಸಿದ ಸಿಎಂ

ಬೆಳಗಾವಿ: ನಗರದ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಆವರಣದಲ್ಲಿ ನಿರ್ಮಿಸಿರುವ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡದ ಉದ್ಘಾಟನೆ ಹಾಗೂ ಗೃಹ ವೈದ್ಯರ ವಸತಿ ನಿಲಯ ಕಟ್ಟಡ ನಿರ್ಮಾಣ ಕಾಮಗಾರಿಯ ಶಿಲಾನ್ಯಾಸ, ಬೆಳಗಾವಿ ಸ್ಮಾರ್ಟ್ ಸಿಟಿ ಅನುದಾನದಲ್ಲಿ ನಿರ್ಮಾಣಗೊಂಡ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬೆಳಗಾವಿ ಬಸ್ ನಿಲ್ದಾಣದ ಉದ್ಘಾಟನೆ ಹಾಗೂ ರಾಣಿ ಚನ್ನಮ್ಮ ವಿವಿಯ ಹಿರೇಬಾಗೇವಾಡಿ ಹೊಸ ಆವರಣದಲ್ಲಿ ಪಿ.ಎಂ ಉಷಾ ವಿವಿಧ ಕಟ್ಟಡಗಳ ಹಾಗೂ ರಾಷ್ಟ್ರೀಯ ಹೆದ್ದಾರಿಯಿಂದ ವಿವಿಯ ನೂತನ ಆವರಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆ ಕಾಮಗಾರಿಗಳ ಶಂಕುಸ್ಥಾಪನೆಯನ್ನು ಸಿಎಂ ಸಿದ್ದರಾಮಯ್ಯ ಅವರು ಶನಿವಾರ ನೆರವೇರಿಸಿದರು.



ಈ ವೇಳೆ ಮಾತನಾಡಿದ ಸಿಎಂ ಸಿದ್ದರಾಮಯ್ಯ ಅವರು, ಸರ್ಕಾರಿ ಆಸ್ಪತ್ರೆಗೆ ಬರುವವರೆಲ್ಲಾ ಬಡ-ಮಧ್ಯಮ ವರ್ಗದವರು. ಅವರಿಗೆ ಅತ್ಯುತ್ತಮ ಆರೋಗ್ಯ ಸೇವೆ ಒದಗಿಸಲು ಪ್ರತೀ ಜಿಲ್ಲೆಗೆ ಒಂದು ಸರ್ಕಾರಿ ಮೆಡಿಕಲ್ ಕಾಲೇಜು, ಒಂದು ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಿಸುವುದು ನನ್ನ ಗುರಿ. ಬರೀ ಆಸ್ಪತ್ರೆ ಕಟ್ಟಡ ಕಟ್ಟಿದರೆ ಸಾಲದು, ಅದಕ್ಕೆ ತಕ್ಕಂತೆ ತಜ್ಞ ವೈದ್ಯರನ್ನೂ ನೇಮಿಸುತ್ತೇವೆ. ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೀರ್ಮಾನಿಸಿದ್ದೇವೆ ಎಂದು ತಿಳಿಸಿದರು.

ಸದ್ಯ ಪ್ರಭಾಕರ್ ಕೋರೆ ಅವರ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ವೈದ್ಯರು ಸರ್ಕಾರಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಉಚಿತವಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಇದಕ್ಕಾಗಿ ಕೋರೆ ಅವರಿಗೆ ಅಭಿನಂದಿಸುತ್ತೇನೆ. ನಮ್ಮ ಸರ್ಕಾರ ಅಸಮಾನತೆಯನ್ನು ಅಳಿಸುವ ದಿಕ್ಕಿನಲ್ಲಿ ತಳ ಸಮುದಾಯಗಳಿಗೆ ಅವಕಾಶ ಮತ್ತು ಅನುಕೂಲಗಳನ್ನು ಕಲ್ಪಿಸುತ್ತಿದೆ. ಅಸಮಾನತೆ ಇರುವವರೆಗೆ ತಳ ಸಮುದಾಯಗಳ ಜನ ಮುಖ್ಯವಾಹಿನಿಗೆ ಬರಲು ಸಾಧ್ಯವಿಲ್ಲ ಎನ್ನುವ ಮಾತುಗಳನ್ನು ನೆನಪಿನಲ್ಲಿ ಇಟ್ಟುಕೊಂಡು ಕಾರ್ಯಕ್ರಮ ರೂಪಿಸುತ್ತಿದ್ದೇವೆ.

ಈ ವೇಳೆ ಸಚಿವರಾದ ಶರಣ ಪ್ರಕಾಶ್ ಪಾಟೀಲ್, ಸತೀಶ್ ಜಾರಕಿಹೊಳಿ, ಲಕ್ಷ್ಮಿ ಹೆಬ್ಬಾಳ್ಕರ್, ರಾಮಲಿಂಗಾರೆಡ್ಡಿ, ಎಂ.ಸಿ.ಸುಧಾಕರ್ ಸೇರಿ ಹಲವು ಗಣ್ಯರು, ಚುನಾಯಿತ ಪ್ರತಿನಿಧಿಗಳು, ಅಧಿಕಾರಿಗಳು ಉಪಸ್ಥಿತರಿದ್ದರು.

ಕನ್ನಂಬಾಡಿ ಕಟ್ಟೆಗೆ ಅಡಿಗಲ್ಲು ಹಾಕಿದವನು ಟಿಪ್ಪು ಸುಲ್ತಾನ್: ಕೆಎನ್ ರಾಜಣ್ಣ

ತುಮಕೂರು: ಟಿಪ್ಪು ಸುಲ್ತಾನನನ್ನು ಬಹಳ ಅವಹೇಳನಕಾರಿಯಾಗಿ ತೋರಿಸಲಾಗುತ್ತೆ. ಆದ-ರೆ ನಾನು ಓದಿರುವ ಪ್ರಕಾರ ಕನ್ನಂಬಾಡಿ ಕಟ್ಟೆಯನ್ನು ಕಟ್ಟಲು ಪ್ರಾರಂಭ ಮಾಡಿದ್ದೇ ಅವನು. ಅನಂತರ ನಾಲ್ವಡಿ ಕೃಷ್ಣರಾಜ ಒಡೆಯರ್ ತಮ್ಮ ಕಾಲದಲ್ಲಿ ಅದನ್ನು ಸಂಪೂರ್ಣ ಮಾಡಿದ್ದಾರೆ. ನಮ್ಮ ಮಕ್ಕಳಿಗೆ ಇತಿಹಾಸ ಸ್ಪಷ್ಟವಾಗಿ ತಿಳಿಸಬೇಕು, ಅದನ್ನು ತಿರುಚಬಾರದು ಎಂದು ಮಾಜಿ ಸಚಿವ ಕೆಎನ್ ರಾಜಣ್ಣ ಹೇಳಿದ್ದಾರೆ.

ತುಮಕೂರಿನಲ್ಲಿ ಮಾತನಾಡಿದ ಅವರು, ಒಡೆಯರ್ ಕಾಲದಲ್ಲಿ ಏಷಿಯಾ ಸಂಪೂರ್ಣ ಮಾಡಬೇಕಾದ್ರೆ ಹಣಕಾಸಿನ ತೊಂದರೆ ಬಂತು. ಮನೆಯಲ್ಲಿದ್ದ ಚಿನ್ನ ತೆಗೆದುಕೊಂಡು ಹೋಗಿ ಬಾಂಬೆಯಲ್ಲಿ ಮಾರಿದರು. ನಾವು ಇದನ್ನು ಮರೆಯಬಾರದು. ಟಿಪ್ಪು ಸುಲ್ತಾನ್ ನಾಲ್ಕು ಯುದ್ಧ ಮಾಡ್ತಾನೆ. 3ನೇ ಯುದ್ಧದಲ್ಲಿ ಸೋತು ಬಿಡ್ತಾನೆ. ಈ ವೇಳೆ ಬ್ರಿಟಿಷರು 3 ಕೋಟಿ 30 ಲಕ್ಷ ಯುದ್ಧದ ಖರ್ಚು ಕೇಳಿದ್ದಕ್ಕೆ ಆತ ಮಕ್ಕಳನ್ನು ಅಡವಿಡುತ್ತಾನೆ. ಜೈಲಿನಲ್ಲಿ ಇಟ್ಟ ಮಕ್ಕಳನ್ನು ದುಡ್ಡು ಕೊಟ್ಟು ಬಿಡಿಸಿಕೊಳ್ಳಬೇಕಾದರೆ, 4ನೇ ಯುದ್ಧದಲ್ಲಿ ಮೀರ್ ಸಾದಿಕ್ ಮೋಸದಿಂದಾಗಿ ಸೋಲುತ್ತಾನೆ. ಟಿಪ್ಪು ಸುಲ್ತಾನ್‌ಗೆ ಮೀರ್ ಸಾದಿಕ್ ದ್ರೋಹ ಮತ್ತು ಶಸ್ತ್ರಾಗಾರ ಡ್ಯಾಮೇಜ್ ಆಗದೆ ಇದ್ದಿದ್ದರೆ ಅವನು ಸೋಲುತ್ತಿರಲಿಲ್ಲ. ಮೋಸದಿಂದ ಯುದ್ಧದಲ್ಲಿ ಆತನನ್ನ ಸೋಲಿಸಲಾಯ್ತು ಎಂದು ರಾಜಣ್ಣ ಹೇಳಿದ್ದಾರೆ.

ನಮ್ಮ ರಾಜ್ಯದಲ್ಲಿ ರೇಷ್ಮೆ ಬರಲು ಟಿಪ್ಪು ಕಾರಣ, ಟಿಪ್ಪು ರೇಷ್ಮೆ ಜನಕ. ರೇಷ್ಮೆ ಮೊದಲನೇ ಬೆಳೆಯನ್ನು ಸುಲ್ತಾನ್ ಕಡ್ಡಿ ಅಂತಾ ಪರ್ಷಿಯಾದಿಂದ ತಂದಿದ್ದೇ ಅವನು. ಟಿಪ್ಪು ಆನೆಗೆ ಕಣ್ಣು ಹೋದಾಗ ಆತ ನಂಜುಂಡೇಶ್ವರನಿಗೆ ಹರಕೆ ಮಾಡಿಕೊಳ್ತಾನೆ. ಆ ಬಳಿಕ ಆನೆಗೆ ಕಣ್ಣು ಬರುತ್ತೆ. ಹೀಗಾಗಿ ಪಚ್ಚೆಯನ್ನು ನಂಜುಂಡೇಶ್ವರನ ಲಿಂಗದ ಮೇಲಿಟ್ಟು ಪೂಜೆ ಮಾಡ್ತಾನೆ. ಇದೆಲ್ಲಾ ಟಿಪ್ಪು ಸುಲ್ತಾನ್ ಬಗ್ಗೆ ಇರುವ ಒಳ್ಳೆಯ ಅಂಶಗಳು. ಅಲ್ಲೆಲ್ಲೋ ಕೊಡಗಿನಲ್ಲಿ ಅವನ ಆಡಳಿತವನ್ನು ಪ್ರಶ್ನೆ ಮಾಡಿದಾಗ, ರೂಲ್ ಲೇಸ್ ಆಗಿ ಅದನ್ನು ಸಪ್ರೆಸ್ ಮಾಡಲೇಬೇಕಾಗುತ್ತೆ. ಇದನ್ನೆಲ್ಲಾ ಹಾಗೆ ಹೀಗೆ ಮಾಡ್ಬಿಟ್ಟ ಅಂತಾರೆ. ಒಳ್ಳೇದು ಮಾಡಿದ್ದನ್ನು ಹೇಳಲಿ ಎಂದು ರಾಜಣ್ಣ ಹೇಳಿದ್ದಾರೆ.

ಕೃಷ್ಣರಾಜ ಸಾಗರ ಜಲಾಶಯಕ್ಕೆ ಅಡಿಗಲ್ಲು ಹಾಕಿದ್ದೇ ಟಿಪ್ಪು ಸುಲ್ತಾನ್ ಎಂಬ ಸಚಿವ ಮಹದೇವಪ್ಪ ಹೇಳಿಕೆ ಈ ಹಿಂದೆ ಕರ್ನಾಟಕದಲ್ಲಿ ವಿವಾದದ ಕಿಡಿ ಹೊತ್ತಿಸಿತ್ತು. ರಾಜಕೀಯವಾಗಿ ಈ ಹೇಳಿಕೆಗೆ ಬಂದಿದ್ದ ಆಕ್ಷೇಪಗಳು ಒಂದೆಡೆಯಾದರೆ, ಇತಿಹಾಸ ತಜ್ಞರಿಂದಲೂ ಸಚಿವರ ಮಾತಿಗೆ ವಿರೋಧ ವ್ಯಕ್ತವಾಗಿತ್ತು.

ಜಾತಿ ಸಮೀಕ್ಷೆ ನಿಲ್ಲಿಸಿ, ಇದೊಂದು ಅವೈಜ್ಞಾನಿಕ ಸಮೀಕ್ಷೆ : ಸೋಮಣ್ಣ ಕಿಡಿ

ಬೆಂಗಳೂರು: ಜಾತಿ ಸಮೀಕ್ಷೆಯನ್ನು ದಯವಿಟ್ಟು ಇಲ್ಲಿಗೆ ನಿಲ್ಲಿಸಿ. ಹುಚ್ಚರ ಸಂತೆಯಲ್ಲಿ ಯಾರೂ ಬಂದು ನಿಲ್ಲಬೇಡಿ" ಎಂದು ಕೇಂದ್ರ ಸಚಿವ ವಿ. ಸೋಮಣ್ಣ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬೆಂಗಳೂರು ವಿಜಯನಗರ ನಿವಾಸದ ಬಳಿ ಮಾತನಾಡಿದ ಅವರು, "ಸಿದ್ದರಾಮಯ್ಯ ಕೆಲಸಕ್ಕೆ ಬಾರದ ಕೆಲಸ ಸೃಷ್ಟಿ ಮಾಡಿದ್ದಾರೆ. ಸುಮಾರು 1 ಗಂಟೆ 4 ನಿಮಿಷ ಸಮೀಕ್ಷಾದಾರರು ನನ್ನ ಮಾಹಿತಿ ಪಡೆದಿದ್ದಾರೆ. ಇದೊಂದು ಅವೈಜ್ಞಾನಿಕ ಸಮೀಕ್ಷೆ ಆಗಿದೆ. ತಾಂತ್ರಿಕ ಸಮಸ್ಯೆಯಿಂದ ಕೂಡಿದೆ. ಇನ್ನೊಂದು ಕಾಂತರಾಜ್ ಸಮಿತಿ ಆಗುತ್ತದೆ ಅಷ್ಟೇ. ಅನಾವಶ್ಯಕವಾಗಿ ಮಾಡುವ ಗೊಂದಲದಿಂದ

ಸರ್ಕಾರಕ್ಕೆ ಸರಿಯಾದ ಮಾಹಿತಿ ಕೊಡಲ್ಲ ಎಂದರು.

ಇದರಲ್ಲಿ ಸರ್ಕಾರ ಸಾಧನೆ ಮಾಡಲು ಯಾವುದೂ ಸಿಗಲ್ಲ. ಅವೈಜ್ಞಾನಿಕ ಗಣತಿಯಿಂದ ಮಾಹಿತಿ ಸಿಗಲ್ಲ. ಇದನ್ನು ಇನ್ನೂ ಸರಳೀಕರಣ ಮಾಡಿ. ಅಧಿಕಾರಿಗಳಿಗೆ ಸರಿಯಾದ ಮಾಹಿತಿ ಗೊತ್ತಿಲ್ಲ. ಸುಮಾರು ಅಧಿಕಾರಿಗಳು ಕೇಳಿದ ಮಾಹಿತಿ ಅನಾವಶ್ಯಕವಾಗಿತ್ತು. ಇದರಿಂದ ಜನರು ಗೊಂದಲ ಒಳಗಾಗುತ್ತಾರೆ" ಎಂದರು.

"ಸಮೀಕ್ಷೆ ಮಾಡಲು 6 ತಿಂಗಳು ಬೇಕು. ಇದು ಕಾಂತರಾಜ್ ಸಮಿತಿಗಿಂತಲೂ ಕೆಟ್ಟದಾಗಿ ಆಗುತ್ತದೆ. ಈ ಸರ್ಕಾರಕ್ಕೆ ಜಾತಿ ಬಿಟ್ಟರೆ ಬೇರೆ ಅವಶ್ಯಕತೆ ಇಲ್ಲ. ಯಾವ ಸಮಾಜಕ್ಕೆ ಅನ್ಯಾಯ ಮಾಡಬೇಕು ಎಂಬುದು ನಿಮ್ಮ ತಲೆಯಲ್ಲಿ ಇದೆ. ಸಿದ್ದರಾಮಯ್ಯರ ಬಗ್ಗೆ ಕಾಂಗ್ರೆಸ್ ಅವರೇ ಮಾತನಾಡುತ್ತಾರೆ. ಇದು ನಿಮಗೆ ಶೋಭೆ ತರಲ್ಲ. ಈ ರೀತಿಯಲ್ಲಿ ಮಾಡಲು ಹೋದರೆ ಒಂದು ವರ್ಷ ಆಗುತ್ತದೆ. ದಯವಿಟ್ಟು ಈಗಲೇ ರದ್ದುಗೊಳಿಸಿ. ಸಿದ್ದರಾಮಯ್ಯ ಸಾಹೇಬರ್ರೆ ಇನ್ನೂ ನಾವು ಕಲಿಯಬೇಕು" ಎಂದು ಟಾಂಗ್ ನೀಡಿ-ದ್ದಾರೆ.

ಡಿ.ಕೆ. ಶಿವಕುಮಾರ್ ಸಹ ಇದರ ಒಂದು ಭಾಗ. ಯಾರ ಮೇಲೆ ಎಷ್ಟು ಟೋಪಿ ಹಾಕುತ್ತಾರೆ. ಉಪಮುಖ್ಯಮಂತ್ರಿ ಸಹ ಇದಕ್ಕೆ ಪಾಲುದಾರರು. ದಯವಿಟ್ಟು ಇಲ್ಲಿಗೆ ನಿಲ್ಲಿಸಿ. ಹುಚ್ಚರ ಸಂತೆಯಲ್ಲಿ ಯಾರೂ ಬಂದು ನಿ